ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

**ಪಟ್ಟಿ – ೧೮**

**ಒಟ್ಟು ಪ್ರಶ್ನೆಗಳು – ೭೪**

# ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತೊಂಬತ್ತನೇ ಅಧಿವೇಶನ

**ಬುಧವಾರ, ದಿನಾಂಕ : ೨೨ನೇ ಜುಲೈ, ೨೦೧೫**

---

## ಸಮೂಹ – III

೧. ಅರಣ್ಯ ಸಚಿವರು

೨. ಕಂದಾಯ ಸಚಿವರು

೩. ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು

೪. ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು

೫. ಸಣ್ಣ ನೀರಾವರಿ ಸಚಿವರು

೬. ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು

೭. ಕಾರ್ಮಿಕ ರಾಜ್ಯ ಸಚಿವರು

---

## ಎಸ್.ಸಿ.ಪಿ ಅಡಿಯಲ್ಲಿ ಎಸ್.ಸಿ/ಎಸ್.ಟಿ.ಗಳಿಗೆ ಕೊಳವೆ ಬಾವಿಗಳ ಸೌಲಭ್ಯ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೧೬ (೨೦೫೨) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಣ್ಣ ನೀರಾವರಿ ಇಲಾಖೆ ವತಿಯಿಂದ ಪ.ಜಾತಿ ಮತ್ತು ಪ.ವರ್ಗದವರಿಗೆ ವಿಶೇಷ ಘಟಕ ಯೋಜನೆ ಅಡಿಯಲ್ಲಿ ಕೊಳವೆ ಬಾವಿ ಕೊರೆಸಿ ವಿದ್ಯುಚ್ಛಕ್ತಿ ಸೌಲಭ್ಯ ಅಳವಡಿಸುವ ಯೋಜನೆ ಜಾರಿಯಲ್ಲಿದೆಯೇ;

(ಆ) ೨೦೧೪–೧೫ ಮತ್ತು ೨೦೧೫–೧೬ನೇ ಸಾಲಿನಲ್ಲಿ ಈ ಸೌಲಭ್ಯವನ್ನು ಯಾವ ಯಾವ ಜಿಲ್ಲೆಗಳಲ್ಲಿ ಎಷ್ಟೆಷ್ಟು ಸಂಖ್ಯೆಯಂತೆ ಜಾರಿಗೊಳಿಸಲಾಗಿದೆ;

(ಇ) ಇತ್ತೀಚೆಗೆ ಈ ಸೌಲಭ್ಯವನ್ನು ತಡೆಹಿಡಿಯಲಾಗಿದೆಯೇ;

(ಈ) ತಡೆಹಿಡಿಯಲಾಗಿದ್ದಲ್ಲಿ ಯಾವ ಕಾರಣಕ್ಕಾಗಿ ತಡೆಹಿಡಿಯಲಾಗಿದೆ;

(ಉ) ಮಂಜೂರಾಗಿ ತಡೆಹಿಡಿಯಲಾದ ಸೌಲಭ್ಯವನ್ನು ಯಾವಾಗ ಜಾರಿ ಮಾಡಲಾಗುವುದು ?



## ಪಹಣಿ ಹಾಗೂ ಖಾತಾ ದಾಖಲೆಗಳಲ್ಲಿ ತಪ್ಪು ಮಾಹಿತಿ ನಮೂದಿಸುತ್ತಿರುವ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೧೭ (೧೪೩೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರೈತರಿಗೆ ನೀಡುವ ಪಹಣಿ ಮತ್ತು ಖಾತಾ ದಾಖಾಲೆಗಳಲ್ಲಿ ಉದ್ದೇಶಪೂರ್ವಕವಾಗಿ ಸಿಬ್ಬಂದಿಯವರು ತಪ್ಪು ಮಾಹಿತಿ ನಮೂದಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂತಹ ಸಿಬ್ಬಂದಿಗಳ ಮೇಲೆ ಯಾವ ರೀತಿಯ ಶಿಸ್ತು ಕ್ರಮಗಳನ್ನು ಜರುಗಿಸಲಾಗಿದೆ;

(ಆ) ಈ ರೀತಿ ಸಿಬ್ಬಂದಿಗಳು ತಪ್ಪು ಮಾಡಿದ ದಾಖಲೆಗಳನ್ನು ತಿದ್ದುಪಡಿ ಮಾಡಿಕೊಡಲು ಸರ್ಕಾರಕ್ಕೆ ಬಂದಿರುವ ಒಟ್ಟು ಅರ್ಜಿಗಳ ಸಂಖ್ಯೆ ಎಷ್ಟು; ವಿಲೇವಾರಿ ಮಾಡಿರುವ ಅರ್ಜಿಗಳ ಸಂಖ್ಯೆ ಎಷ್ಟು; ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು;

(ಇ) ಈ ಅರ್ಜಿಗಳನ್ನು ವಿಲೇವಾರಿ ಮಾಡಲು ಸರ್ಕಾರದ ಸಕಾಲ ಕಾರ್ಯಕ್ರಮ ಅನ್ವಯಿಸುವುದಿಲ್ಲವೇ;

(ಈ) ಹಾಗಿದ್ದಲ್ಲಿ, ಆಗಿರುವ ವಿಳಂಬ ತಪ್ಪಿಸಲು ಸರ್ಕಾರ ತೆಗೆದುಕೊಂಡ ಕ್ರಮ ಏನು ?

## ಹಿರಿಯ ಅಧಿಕಾರಿಗಳಾದ ಐ.ಎ.ಎಸ್. ಅಧಿಕಾರಿಗಳ ಮೇಲಿನ ತನಿಖೆ

**ಶ್ರೀ ಗೋ. ಮಧೂಸೂಧನ್ (ಪದವೀಧರರ ಕ್ಷೇತ್ರ):–**

೧೬೧೮ (೧೪೩೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ನಗರದ ಚಾಮುಂಡಿ ಬೆಟ್ಟದ ತಪ್ಪಲಿನ ಕುರುಬಾರಹಳ್ಳಿ ಸರ್ವೆ ನಂ. ೪ ಮತ್ತು ಆಲನಹಳ್ಳಿ ಸರ್ವೆ ನಂ. ೪೧ಕ್ಕೆ ಸಂಬಂಧಿಸಿದಂತೆ, ನಿವೃತ್ತ ಅಧಿಕಾರಿ ನಾರಾಯಣಸ್ವಾಮಿರವರು ಸರ್ಕಾರಕ್ಕೆ ವರದಿ ಸಲ್ಲಿಸಿದ್ದು, ವರದಿಯ ಪ್ರಮುಖ ಅಂಶಗಳೇನು ; (ವಿವರ ನೀಡುವುದು)

(ಆ) ಆಲನಹಳ್ಳಿ ಸರ್ವೆ ನಂ. ೪೧ ಮತ್ತು ಕುರುಬಾರಹಳ್ಳಿ ಸರ್ವೆ ನಂ. ೪ಕ್ಕೆ ಮತ್ತು ಚೌಡಹಳ್ಳಿ ಸರ್ವೆ ನಂ. ೩೯ ಕ್ಕೆ ಸಂಬಂಧಿಸಿದಂತೆ ಯಾವ ನ್ಯೂನತೆಗಳನ್ನು ಗುರುತಿಸಲಾಗಿದೆ ;

(ಇ) ಈ ಇಬ್ಬರು ಜಿಲ್ಲಾಧಿಕಾರಿಗಳು ಮೇಲ್ಕಂಡ 'ಬಿ' ಖರಾಬು ಜಮೀನಿಗೆ ಸಂಬಂಧಿಸಿದಂತೆ ನೀಡಿರುವ ಆದೇಶಗಳ ಬಗ್ಗೆ ಈ ಸಮಿತಿ ಯಾವ ಅಭಿಪ್ರಾಯವನ್ನು ವ್ಯಕ್ತಪಡಿಸಿದೆ ; (ವಿವರ ನೀಡುವುದು)

(ಈ) ಮೇಲ್ಕಂಡ 'ಬಿ' ಖರಾಬು ಜಮೀನಿಗೆ ಸಂಬಂಧಿಸಿದಂತೆ ಮೈಸೂರು ಮಹಾರಾಜರಿಗೂ ಹಾಗೂ ಕೇಂದ್ರ ಸರ್ಕಾರಕ್ಕೂ ೧೯೫೦ ರಲ್ಲಿ ನಡೆದ ಒಪ್ಪಂದ ಮತ್ತು ಒಡಂಬಡಿಕೆಗೆ ಸಂಬಂಧಪಟ್ಟಂತೆ ಈ ಸಮಿತಿಯ ಅಭಿಪ್ರಾಯವೇನು ? (ವಿವರ ನೀಡುವುದು)



## ಸರ್ಕಾರಿ ಭೂಮಿಗಳ ಅನಧಿಕೃತ ಸಾಗುವಳಿ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೧೯ (೧೪೩೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ಯಾವ ಯಾವ ತಾಲ್ಲೂಕುಗಳಲ್ಲಿ ಎಷ್ಟು ಅಕ್ರಮ–ಸಕ್ರಮ ಸಮಿತಿಗಳು ನಿಯಮ ಉಲ್ಲಂಘಿಸಿ ಸರ್ಕಾರಿ ಭೂಮಿಗಳ ಅನಧಿಕೃತ ಸಾಗುವಳಿಯನ್ನು ಸಕ್ರಮಗೊಳಿಸಿರುತ್ತದೆ ;

(ಆ) ಯಾವ ಯಾವ ತಾಲ್ಲೂಕಿನ ಯಾವ ಯಾವ ಗ್ರಾಮ ಹಾಗೂ ಸರ್ವೆ ನಂ.ಗಳಿಗೆ ಈ ರೀತಿಯ ಕಾನೂನುಬಾಹಿರ ಮಂಜೂರಾತಿಯನ್ನು ನೀಡಿರುವ ಅಧಿಕಾರಿ ಹಾಗೂ ಅಧಿಕಾರೇತರರು ಯಾರು ಯಾರು ; ಅವರುಗಳ ಮೇಲೆ ಸರ್ಕಾರ ಈವರೆವಿಗೂ ಕೈಗೊಂಡಿರುವ ಕ್ರಮಗಳೇನು ; (ಪೂರ್ಣ ವಿವರ ನೀಡುವುದು)

(ಇ) ಇಂತಹ ಎಷ್ಟು ಪ್ರಕರಣಗಳನ್ನು ತನಿಖೆಗಾಗಿ ಲೋಕಾಯುಕ್ತಕ್ಕೆ ವಹಿಸಲಾಗಿದೆ ಹಾಗೂ ಲೋಕಾಯುಕ್ತ ಸಂಸ್ಥೆ ಈವರೆವಿಗೂ ಎಷ್ಟು ಪ್ರಕರಣಗಳನ್ನು ತನಿಖೆ ಮಾಡಿ ವರದಿ ನೀಡಿರುತ್ತದೆ ; ಇಲ್ಲವಾದಲ್ಲಿ ಸಂಬಂಧಪಟ್ಟವರ ಮೇಲೆ ತನಿಖೆ ಕೈಗೊಳ್ಳುವಲ್ಲಿ ಕೈಗೊಳ್ಳುವ ಕ್ರಮವೇನು ?

## ಅಪಘಾತ ಹಾಗೂ ಇತರ ಕಾರಣಗಳಿಂದ ವನ್ಯ ಪ್ರಾಣಿಗಳ ಸಾವು

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೨೦ (೧೪೩೯) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಮೈಸೂರು, ಚಾಮರಾಜನಗರ, ಹಾಸನ ; ಕೊಡಗು ಜಿಲ್ಲೆಯ ಅರಣ್ಯ ಪ್ರದೇಶಗಳಲ್ಲಿ ವೇಗವಾಗಿ ಸಂಚರಿಸುವ ವಾಹನಗಳಿಂದ ಅಪಘಾತ ಮತ್ತು ವಿದ್ಯುತ್ ಆಘಾತಗಳಲ್ಲದೆ ಭೇಟೆಗೆ ಬಲಿಯಾಗುತ್ತಿರುವ ವನ್ಯ ಪ್ರಾಣಿಗಳ ಸಂಖ್ಯೆ ಎಷ್ಟು ; ಎಷ್ಟು ಪ್ರಕರಣಗಳನ್ನು ದಾಖಲಿಸಿ, ತನಿಖೆ ನಡೆಸಿ ಕ್ರಮ ಜರುಗಿಸಲಾಗಿದೆ ; ಇದನ್ನು ತಡೆಯಲು ಕೈಗೊಂಡಿರುವ ಕ್ರಮಗಳೇನು ;

(ಆ) ಈ ಕಾಡುಗಳ ರಸ್ತೆಯಲ್ಲಿ ವಾಹನಗಳು ನಿಧಾನವಾಗಿ ಚಲಿಸುವಂತೆ ವೇಗದ ಮಿತಿ ವಿಧಿಸುವುದು, ಸೂಚನಾ ಫಲಕ ಅಳವಡಿಸುವಿಕೆ, ವೈಜ್ಞಾನಿಕ ಮಾದರಿ ಹಂಪ್ ನಿರ್ಮಾಣಕ್ಕೆ ಕ್ರಮ ಜರುಗಿಸಲಾಗುವುದೇ ?

## ಪ್ರಾದೇಶಿಕ ಆಯುಕ್ತರು ಕಲಬುರಗಿ ವ್ಯಾಪ್ತಿಯಲ್ಲಿ ಬರುವ ಸಿಬ್ಬಂದಿಗಳು ಒಂದೇ ಸ್ಥಳದಲ್ಲಿ ಕಾರ್ಯನಿರ್ವಹಿಸುತ್ತಿರುವ ಬಗ್ಗೆ.

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೨೧ (೧೪೪೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಾದೇಶಿಕ ಆಯುಕ್ತರು ಕಲಬುರಗಿ ಇವರ ವ್ಯಾಪ್ತಿಯಲ್ಲಿ ಬರುವ ಕಂದಾಯ ಇಲಾಖೆಯ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)



(ಆ) ಹಾಲಿ ೨ ವರ್ಷಕ್ಕೂ ಮೇಲ್ಪಟ್ಟು ಕಾರ್ಯನಿರ್ವಹಿಸುತ್ತಿರುವ ಮತ್ತು ಒಂದೇ ಹುದ್ದೆಯಲ್ಲಿ ಒಂದೇ ಸ್ಥಳದಲ್ಲಿ ಕಾರ್ಯನಿರ್ವಹಿಸುತ್ತಿರುವವರು ಯಾರ್‍ಯಾರು; (ಹೆಸರು, ಪದನಾಮ ವೃಂದವಾರು ಸಂಪೂರ್ಣ ತಾಲ್ಲೂಕುವಾರು ವಿವರ ಒದಗಿಸುವುದು)

(ಇ) ಸುಮಾರು ೫ ವರ್ಷಗಳಿಂದ ಅದೇ ಹುದ್ದೆಯಲ್ಲಿ ಅದೇ ಸ್ಥಳದಲ್ಲಿ ಕಾರ್ಯನಿರ್ವಹಿಸುತ್ತಿರುವವರ ಅಧಿಕಾರಿ / ಸಿಬ್ಬಂದಿಗಳಿಗೆ ಬೇರೆ ಕಡೆಗೆ ವರ್ಗಾವಣೆ ಮಾಡದಿರಲು ಕಾರಣಗಳೇನು ? (ವಿವರ ನೀಡುವುದು)

## ಸಣ್ಣ ನೀರಾವರಿ ಇಲಾಖೆಯ ಕಾರ್ಯಕ್ರಮಗಳ ಬಗ್ಗೆ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೨೨ (೧೪೪೨) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಣ್ಣ ನೀರಾವರಿ ಇಲಾಖೆಯ ಮೂಲಕ ಅನುಷ್ಠಾನಗೊಳ್ಳುತ್ತಿರುವ ಕಾರ್ಯಕ್ರಮಗಳಾವುವು;

(ಆ) ಆ ಪೈಕಿ ಸಮರ್ಪಕವಾಗಿ ಅನುಷ್ಠಾನಗೊಂಡ ಕಾರ್ಯಕ್ರಮಗಳೆಷ್ಟು; ಬಾಕಿ ಇರುವ ಕಾರ್ಯಕ್ರಮಗಳೆಷ್ಟು; (ಕಾರ್ಯಕ್ರಮಗಳವಾರು ವಿವರ ನೀಡುವುದು)

ಇ) ಈ ಕಾರ್ಯಕ್ರಮಗಳಿಗೆ ಬಿಡುಗಡೆಯಾದ ಅನುದಾನ ಎಷ್ಟು ಖರ್ಚಾದ ಅನುದಾನ ಎಷ್ಟು ? (ತಾಲ್ಲೂಕುವಾರು, ಕಾರ್ಯಕ್ರಮವಾರು ಮಾಹಿತಿ ನೀಡುವುದು)

## ಬೃಹತ್ ನೀರಾವರಿ ಯೋಜನೆಗಳ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೧೬೨೩ (೨೦೨೨) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪ್ರಗತಿಯಲ್ಲಿರುವ ಬೃಹತ್ ನೀರಾವರಿ ಯೋಜನೆಗಳು ಯಾವುವು; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಯೋಜನೆಗಳ ಅಂದಾಜು ಮೊತ್ತವೆಷ್ಟು ಹಾಗೂ ಕಾಲಮಿತಿಯೇನು; (ವಿವರ ನೀಡುವುದು)

(ಇ) ಯೋಜನೆಯ ಕಾಮಗಾರಿಗಳು ಯಾವ ಯಾವ ಹಂತದಲ್ಲಿವೆ; ಈ ಯೋಜನೆಗಳಿಗೆ ಕಳೆದ ಮೂರು ವರ್ಷಗಳಿಂದ ಖರ್ಚು ಮಾಡಿರುವ ಒಟ್ಟು ಮೊತ್ತವೆಷ್ಟು ? (ವಿವರ ನೀಡುವುದು)

## ಎಸ್.ಸಿ.ವಿ.ಟಿ ಪರೀಕ್ಷೆಯ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೧೬೨೪ (೨೦೨೩) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಎಸ್.ಸಿ.ವಿ.ಟಿ. ಪರೀಕ್ಷೆಯ ವಿಷಯಗಳ ವಿವರ ನೀಡುವುದು;

(ಆ) ಈ ಪರೀಕ್ಷೆಯಲ್ಲಿ ಭಾರಿ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಎಸ್.ಸಿ.ವಿ.ಟಿ ಪರೀಕ್ಷೆಯ ರೂಪುರೇಷೆಗಳ ಬಗ್ಗೆ ವಿವರ ನೀಡುವುದು;



(ಇ) ಈ ಪರೀಕ್ಷೆಯ ಫಲಿತಾಂಶ ನಂತರ ಅಂಕಪಟ್ಟಿ ನೀಡುವಾಗ ಅಧಿಕಾರಿಗಳು ಬಾರಿ ಮೊತ್ತದ ಹಣವನ್ನು ತೆಗೆದುಕೊಂಡು ಹೆಚ್ಚಿನ ಅಂಕಗಳನ್ನು ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಈ ಪರೀಕ್ಷೆಯ ಉತ್ತರ ಪತ್ರಿಕೆಯಲ್ಲಿ ಅಂಕಗಳು ಬೇರೆ ಇದ್ದು ಅಂಕಪಟ್ಟಿ ನೀಡುವಾಗ ಹೆಚ್ಚಿನ ಅಂಕಗಳನ್ನು ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಈ ಅವ್ಯವಹಾರದಲ್ಲಿ ಕೇಂದ್ರ ಕಛೇರಿಯ ಅಧಿಕಾರಿಗಳು ಶಾಮೀಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ೭೯A ೭೯B. ಬಾಕಿ ಪ್ರಕರಣಗಳ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೧೬೨೫ (೨೦೧೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಂದಾಯ ಇಲಾಖೆಯಲ್ಲಿ ೭೯ಎ, ೭೯ಬಿ, ಬಾಕಿ ಇರುವ ಪ್ರಕರಣಗಳು ಎಷ್ಟು ಇದಕ್ಕೆ ಕಾರಣಗಳೇನು ;

(ಆ) ೭೯ಎ, ೭೯ಬಿ, ಪ್ರಕರಣಗಳಲ್ಲಿ ಕಂದಾಯ ಇಲಾಖೆ ಅಧಿಕಾರಿಗಳು ರೈತರನ್ನು ಹಾಗೂ ವ್ಯಾಪಾರಸ್ಥರನ್ನು ಸುಲಿಗೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಕೃಷಿ ಭೂಮಿ ಖರೀದಿ ಮಿತಿಯನ್ನು ೨ ಲಕ್ಷದಿಂದ ೧೦ ಲಕ್ಷಕ್ಕೆ ಏರಿಸಲು ಇರುವ ತೊಂದರೆಗಳೇನು ;

(ಈ) ಬಾಕಿ ಇರುವ ಎಲ್ಲಾ ಪ್ರಕರಣಗಳನ್ನು ಇತ್ಯರ್ಥಗೊಳಿಸಲು ಕಂದಾಯ ಆಂದೋಲನವನ್ನು ಹಮ್ಮಿಕೊಳ್ಳಲಾಗುವುದೇ ?

## ನಿರ್ಮಿತಿ ಕೇಂದ್ರಗಳ ಕುರಿತು.

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೧೬೨೬ (೨೦೨೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ನಿರ್ಮಿತಿ ಕೇಂದ್ರಗಳನ್ನು ಸ್ಥಾಪಿಸಿರುವ ಉದ್ದೇಶಗಳೇನು ; (ವಿವರ ನೀಡುವುದು)

(ಆ) ನಿರ್ಮಿತಿ ಕೇಂದ್ರಗಳಿಗೆ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳನ್ನು ನಿರ್ವಹಿಸುವ ಅಧಿಕಾರವಿದೆಯೇ ;

(ಇ) ಕಳೆದ ೫ ವರ್ಷಗಳಲ್ಲಿ ಸರ್ಕಾರದ ಯಾವ ಯೋಜನೆಗಳಡಿಯಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ನಿರ್ವಹಿಸಲು ನಿರ್ಮಿತಿ ಕೇಂದ್ರಗಳಿಗೆ ನೀಡಲಾಗಿದೆ ? (ವಿವರ ನೀಡುವುದು)

## ಯರಗೋಳ್ ಕುಡಿಯುವ ನೀರಿನ ಯೋಜನೆ ಕುರಿತು.

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೧೬೨೭ (೨೦೨೦) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಯರಗೋಳ್ ಕುಡಿಯುವ ನೀರಿನ ಯೋಜನೆಯ ಅಣೆಕಟ್ಟನ್ನು ನಿರ್ಮಿಸಲಾಗಿದೆಯೇ;

(ಆ) ಅಣೆಕಟ್ಟು ನಿರ್ಮಿಸಲು ವಿಳಂಬ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು ?



## ಬೆಂಗಳೂರು ಹಾಗೂ ಸುತ್ತ–ಮುತ್ತಲಿನ ಜಿಲ್ಲೆಗಳಿಗೆ ಕುಡಿಯುವ ನೀರಿನ ವ್ಯವಸ್ಥೆ ಬಗ್ಗೆ.

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು)**

೧೬೨೮ (೨೦೨೫) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಸೇರಿದಂತೆ ಸುತ್ತ–ಮುತ್ತಲಿನ ಜಿಲ್ಲೆಗಳಿಗೆ ಕುಡಿಯುವ ನೀರನ್ನು ಪೂರೈಸಲು ಎತ್ತಿನ ಹೊಳೆ ಯೋಜನೆ ಬದಲಿಗೆ ಲಿಂಗನಮಕ್ಕಿ ಅಣೆಕಟ್ಟಿನಿಂದ ನೀರು ತರುವ ಯೋಜನೆ ಸರ್ಕಾರಕ್ಕೆ ಇದೆಯೇ ;

(ಆ) ಲಿಂಗನಮಕ್ಕಿ ಜಲಾಶಯದಲ್ಲಿ ಒಟ್ಟು ಎಷ್ಟು ಟಿ.ಎಂ.ಸಿ. ನೀರು ಶೇಖರಣೆಯಾಗುತ್ತದೆ ಇದರಲ್ಲಿ ಎಷ್ಟು ಟಿ.ಎಂ.ಸಿ. ನೀರನ್ನು ವಿದ್ಯುತ್ ಉತ್ಪಾದನೆಗೆ ಬಳಸಲಾಗುತ್ತದೆ ;

(ಇ) ಉಳಿದ ನೀರು ವ್ಯರ್ಥವಾಗಿ ಹರಿದುಹೋಗುವುದುದನ್ನು ತಪ್ಪಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ?

## ಕಾರ್ಮಿಕ ಇಲಾಖೆಯಡಿಯಲ್ಲಿ ಬರುವ ಉದ್ಯೋಗ ವಿನಿಮಯ ಕೇಂದ್ರಗಳು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು)**

೧೬೨೯ (೨೦೨೬) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಕಾರ್ಮಿಕ ಇಲಾಖೆಯಡಿಯಲ್ಲಿ ಬರುವ ಉದ್ಯೋಗ ವಿನಿಮಯ ಕೇಂದ್ರಗಳ ಸಂಖ್ಯೆ ಎಷ್ಟು ;

(ಆ) ಈ ಉದ್ಯೋಗ ವಿನಿಮಯ ಕೇಂದ್ರಗಳಿಂದ ಕಳೆದ ೩ ವರ್ಷಗಳಲ್ಲಿ ಎಷ್ಟು ಜನರು ಉದ್ಯೋಗ ಪಡೆದಿದ್ದಾರೆ ; (ವಿವರ ನೀಡುವುದು)

(ಇ) ಈ ಬದಲಾದ ಸಾಮಾಜಿಕ ವ್ಯವಸ್ಥೆಯಲ್ಲಿ ಈಗಿರುವ ಉದ್ಯೋಗ ವಿನಿಮಯ ಕೇಂದ್ರಗಳನ್ನು ಪುನ:ಶ್ಚೇತನಗೊಳಿಸಲು/ಮಾನವ ಸಂಪನ್ಮೂಲ ಕೇಂದ್ರಗಳನ್ನಾಗಿ ಪರಿವರ್ತಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಅರಣ್ಯ ಹಕ್ಕು ಕಾಯಿದೆ ಅನುಷ್ಠಾನ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು)**

೧೬೩೦ (೨೦೨೭) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅರಣ್ಯ ಹಕ್ಕು ಕಾಯಿದೆಯನ್ನು ಅನುಷ್ಠಾನಗೊಳಿಸಲು ಕೇಂದ್ರ ಸರ್ಕಾರದ ಸೂಚನೆ ಮೇರೆಗೆ ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು;

(ಆ) ಈ ಕಾಯಿದೆಯ ರೂಪುರೇಷೆಗಳೇನು; (ವಿವರ ಒದಗಿಸುವುದು)

(ಇ) ಈ ಕಾಯಿದೆ ಜಾರಿಗೆ ಬರುವುದರಿಂದ ಅರಣ್ಯ ಪ್ರದೇಶದಲ್ಲಿ ವಾಸವಾಡುತ್ತಿರುವ ಪರಿಶಿಷ್ಟ ಪಂಗಡದವರಿಗೆ ಆಗುವ ಅನುಕೂಲತೆಗಳು ಯಾವುವು ?

## ವಸತಿ ರಹಿತ ಬಡಜನರಿಗೆ ನಿವೇಶನ ರಚಿಸಲು ಭೂ ಮಂಜೂರಾತಿ ವಿಳಂಬ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೬೩೧ (೨೦೨೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಸತಿ ರಹಿತ ಬಡ ಜನರಿಗೆ ನಿವೇಶನ ರಚಿಸಲು ಕಂದಾಯ ಇಲಾಖೆಗೆ ಸಲ್ಲಿಸಲಾಗುತ್ತಿರುವ ಪ್ರಸ್ತಾವನೆಗಳ



ಭೂ ಮಂಜೂರಾತಿ ವಿಳಂಬದಿಂದ ಬಡ ಜನರಿಗೆ ನಿವೇಶನ ಹಂಚಿಕೆ ಮಾಡಲು ಸಾಧ್ಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ಮೂರು ವರ್ಷಗಳಿಂದ ಇಲಾಖೆಗೆ ಸಲ್ಲಿಸಲಾಗಿರುವ ಪ್ರಸ್ತಾವನೆಗಳೆಷ್ಟು ; ಇವುಗಳಲ್ಲಿ ಮಂಜೂರಾದ ಹಾಗೂ ಬಾಕಿ ಇರುವ ಪ್ರಸ್ತಾವನೆಗಳೆಷ್ಟು ;

(ಇ) ಮಂಜೂರಾತಿಯ ವಿಳಂಬಕ್ಕೆ ಕಾರಣಗಳೇನು ; ಯಾವಾಗ ಮಂಜೂರು ಮಾಡಲಾಗುವುದು ?

## ರಾಜ್ಯದಲ್ಲಿ ಕೈಗಾರಿಕಾ ತರಬೇತಿ ಕೇಂದ್ರಗಳ ಕಾರ್ಯವ್ಯಾಪ್ತಿ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೬೩೨ (೨೦೨೯) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಕೈಗಾರಿಕಾ ತರಬೇತಿ ಕೇಂದ್ರಗಳು (ಐ.ಟಿ.ಐ) ಕಾರ್ಯನಿರ್ವಹಿಸುತ್ತಿವೆ ; (ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಕೇಂದ್ರಗಳ ವಿವರ ನೀಡುವುದು)

(ಆ) ಈ ಕೇಂದ್ರಗಳಿಂದ ವಾರ್ಷಿಕ (ಸರಾಸರಿ) ಎಷ್ಟು ವಿದ್ಯಾರ್ಥಿಗಳು ತೇರ್ಗಡೆಯಾಗಿ ಹೊರ ಬರುತ್ತಾರೆ ;

(ಇ) ಈ ವಿದ್ಯಾರ್ಥಿಗಳ ಉದ್ಯೋಗಕ್ಕಾಗಿ "ಉದ್ಯೋಗ ಮೇಳ"ಗಳನ್ನು ಆಯೋಜಿಸಲಾಗುತ್ತಿದೆಯೇ ; (ಕಳೆದ ೩ ವರ್ಷಗಳಲ್ಲಿ ಉದ್ಯೋಗ ಪಡೆದುಕೊಂಡ ವಿದ್ಯಾರ್ಥಿಗಳ ಮಾಹಿತಿಯನ್ನು ನೀಡುವುದು)

(ಈ) ಬದಲಾಗುತ್ತಿರುವ ಔದ್ಯೋಗಿಕ ವಲಯಕ್ಕನುಗುಣವಾಗಿ ಈ ಸಂಸ್ಥೆಗಳ ಪಠ್ಯಕ್ರಮದಲ್ಲಿ ಬದಲಾವಣೆಯನ್ನು ತರುವ ಅವಶ್ಯಕತೆಯನ್ನು ಸರ್ಕಾರ ಮನಗಂಡಿದೆಯೇ ?

## ಗೋಮಾಳ ಭೂಮಿಯನ್ನು ಸರ್ಕಾರಿ ಭೂಮಿಯನ್ನಾಗಿ ಬದಲಾವಣೆ ಮಾಡುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೩೩ (೨೯೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮ ಪಂಚಾಯತ್, ಗ್ರಾಮ ಕರಣೀಕರು, ಶಾಲೆ, ಪ್ರಾಥಮಿಕ ಆರೋಗ್ಯ ಕೇಂದ್ರವೂ ಸೇರಿದಂತೆ ಅಗತ್ಯ ಸರ್ಕಾರಿ ಕಟ್ಟಡಕ್ಕೆ ಹಾಗೂ ಇನ್ನಿತರ ಸಾರ್ವಜನಿಕ ಉದ್ದೇಶಗಳಿಗೆ ಸರ್ಕಾರಿ ಭೂಮಿ ಲಭ್ಯವಿಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಇದರ ನಿವಾರಣೆಗೆ ಕೈಗೊಂಡಿರುವ ಕ್ರಮಗಳೇನು ;

(ಆ) ಗ್ರಾಮ ಪಂಚಾಯತ್ ಕೇಂದ್ರ ಸ್ಥಾನದಲ್ಲಿ 'ಗೋಮಾಳ' ಭೂಮಿಯನ್ನು ಅದೇ ಗ್ರಾಮದ ಬೇರೆ ಕಡೆಯಿರುವ ಸರ್ಕಾರಿ ಜಾಗಕ್ಕೆ ಬದಲಾಗಿ ಪರಿವರ್ತನೆಗೆ ಅವಕಾಶವಿದೆಯೇ; (ಸಂಪೂರ್ಣ ವಿವರ ನೀಡುವುದು)

(ಇ) ಸಾರ್ವಜನಿಕ ಉದ್ದೇಶಗಳಿಗಾಗಿ ಗೋಮಾಳ ಜಮೀನನ್ನು ಸರ್ಕಾರಿ ಜಮೀನಾಗಿ ಮತ್ತು ಲಭ್ಯ ಸರ್ಕಾರಿ ಜಮೀನನ್ನು ಗೋಮಾಳಕ್ಕೆ ಕಾಯ್ದಿರಿಸುವ ಸಲುವಾಗಿ ಹಾಗೂ ಗೋವುಗಳು ಕಡಿಮೆ ಇರುವ ಪ್ರದೇಶಗಳಲ್ಲಿನ ಗೋಮಾಳವನ್ನು ಸರ್ಕಾರಿ ಉದ್ದೇಶಕ್ಕೆ ಬಳಸಿಕೊಳ್ಳುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ? (ವಿವರ ನೀಡುವುದು)



## ಪೋಡಿ ಮತ್ತು ಸರ್ವೆ ನಕ್ಷೆಯಲ್ಲಿನ ವಿಳಂಬದ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೩೪ (೨೧೦೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಭೂ ಪರಿವರ್ತನೆ ಮತ್ತು ಇನ್ನಿತರ ಉದ್ದೇಶಕ್ಕಾಗಿ ಕೋರುವ ಸರ್ವೆ ಸ್ಕೆಚ್ ವಿತರಣೆಯಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹೌದಾದಲ್ಲಿ, ಕಾರಣಗಳೇನು ; ವಿಳಂಬವನ್ನು ತಡೆಯಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ;

(ಆ) ಜಮೀನಿನ ಪೋಡಿಗಾಗಿ ಸಲ್ಲಿಕೆಯಾಗಿರುವ ಅರ್ಜಿಗಳೆಷ್ಟು; ವಿಲೇವಾರಿಗೆ ಬಾಕಿ ಇರುವ ಅರ್ಜಿಗಳೆಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಇ) ಜಮೀನಿನ ಪೋಡಿಗಾಗಿ ಸಲ್ಲಿಸಿರುವ ಅರ್ಜಿಗಳು ವಿಳಂಬವಾಗಿ ವಿಲೇವಾರಿಯಾಗುತ್ತಿರುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ;

(ಈ) ಸರ್ವೆ ಸ್ಕೆಚ್‌ಗಳನ್ನು ಕೂಡಲೇ ವಿತರಿಸುವುದು, ಬಾಕಿ ಇರುವ ಪೋಡಿ ಅರ್ಜಿಗಳ ಶೀಘ್ರ ವಿಲೇವಾರಿ ಸೇರಿದಂತೆ, ಸದರಿ ಪ್ರಕರಣಗಳನ್ನು ಯಾವ ಕಾಲಮಿತಿಯೊಳಗೆ ವಿಲೇವಾರಿ ಮಾಡಲು ಸರ್ಕಾರ ಯೋಜನೆ ರೂಪಿಸಿದೆ ?

## ೯೪–ಸಿ ಯೋಜನೆ ವಿಳಂಬವಾಗುತ್ತಿರುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೩೫ (೨೦೨೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಂದಾಯ ಇಲಾಖೆಯ ೯೪–ಸಿ ಯೋಜನೆಯಡಿ ಸ್ವೀಕೃತವಾದ ಅರ್ಜಿಗಳೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು) ವಿಲೇವಾರಿಯಾದ ಪ್ರಕರಣ, ಬಾಕಿ ಇರುವ ಪ್ರಕರಣಗಳೆಷ್ಟು ;

(ಆ) ಎಷ್ಟು ಹಕ್ಕು ಪತ್ರ ವಿತರಿಸಲಾಗಿದೆ ; ವಸೂಲಿ ಮಾಡಿದ ಶುಲ್ಕ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಬಡವರಿಗೆ, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗೆ ೯೪–ಸಿ ಯಡಿ ಶುಲ್ಕ ವಿನಾಯಿತಿ ನೀಡುವ ಬಗ್ಗೆ ಸರ್ಕಾರದ ನಿಲುವೇನು ; (ವಿವರ ನೀಡುವುದು)

(ಈ) ೯೪–ಸಿ ಯಡಿ ಬಿಟ್ಟು ಹೋದ ಫಲಾನುಭವಿಯನ್ನು ಸೇರಿಸಿಕೊಳ್ಳಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ; ಬಾಕಿ ಇರುವ ಪ್ರಕರಣಗಳನ್ನು ಎಷ್ಟು ಸಮಯದಲ್ಲಿ ಪೂರ್ಣಗೊಳಿಸಲಾಗುವುದು ? (ವಿವರ ನೀಡುವುದು)

## ಮೀನುಗಾರಿಕೆ ಇಲಾಖೆಯ ಪ್ರಯೋಜನಗಳು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೩೬ (೨೮೯೯) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೀನುಗಾರಿಕೆ ಇಲಾಖಾವತಿಯಿಂದ ಅನುಷ್ಠಾನಗೊಳ್ಳುತ್ತಿರುವ ಕಾರ್ಯಕ್ರಮಗಳು ಯಾವುವು; ಅವುಗಳ ಪ್ರಯೋಜನ ಪಡೆಯಲು ಇರುವ ಮಾನದಂಡಗಳೇನು ;



(ಆ) ೨೦೧೪–೧೫, ೨೦೧೫–೧೬ರ ಸಾಲಿಗೆ ವಿವಿಧ ಯೋಜನೆಗಳಿಗೆ ನಿಗದಿಪಡಿಸಿದ ಆರ್ಥಿಕ ಮತ್ತು ಭೌತಿಕ ಗುರಿಗಳು ಎಷ್ಟು ;

(ಇ) ಇಲಾಖೆಯ ಪ್ರಯೋಜನಗಳು ಅರ್ಹ ಮೀನುಗಾರರಿಗೆ ದೊರೆಯುತ್ತಿವೆಯೇ; ಪ್ರಯೋಜನಗಳನ್ನು ಅರ್ಹ ಫಲಾನುಭವಿಗೆ ತಲುಪಿಸುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಕ್ರೀಡಾ ವಸತಿ ಶಾಲೆಗಳ ಕುರಿತು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೩೭ (೨೦೩೧) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಿಲ್ಲೆಗೊಂದು ಕ್ರೀಡಾ ವಸತಿ ಶಾಲೆ ಇರಬೇಕೆಂಬ ದೃಷ್ಟಿಯಿಂದ ಸರ್ಕಾರ ಕ್ರೀಡಾ ವಸತಿ ಶಾಲೆ ಆರಂಭಿಸಿದೆಯೇ ; ಹಾಗಿದ್ದಲ್ಲಿ ಎಲ್ಲೆಲ್ಲಿ ಆರಂಭಿಸಲಾಗಿದೆ ; (ಮಾಹಿತಿ ಒದಗಿಸುವುದು)

(ಆ) ಮೇಲ್ಕಂಡ ಶಾಲೆಗಳಲ್ಲಿ ಸಿಬ್ಬಂದಿ ಸೇರಿದಂತೆ ಯಾವುದೇ ಸೌಲಭ್ಯ ಇಲ್ಲದೆ, ಕ್ರೀಡಾಪಟುಗಳನ್ನು ಪ್ರೋತ್ಸಾಹಿಸುವ ಬದಲು ಆತ್ಮಸ್ಥೈರ್ಯ ಕುಗ್ಗಿಸುವ ಕೇಂದ್ರವಾಗಿರುವುದು ನಿಜವೇ ; ಈ ಬಗ್ಗೆ ಕ್ರೀಡಾಪಟುಗಳು ಪ್ರತಿಭಟಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾವೇರಿ ಕ್ರೀಡಾ ವಸತಿ ಶಾಲೆಯ ಸ್ಥಿತಿ–ಗತಿ ಹೇಗಿದೆ ;

(ಈ) ಈ ವಸತಿ ಶಾಲೆಯ ವಿದ್ಯಾರ್ಥಿಗಳು ಜಿಲ್ಲಾಧಿಕಾರಿಗಳಿಗೆ ಮೂಲಭೂತ ಸೌಕರ್ಯಗಳ ಕೊರತೆ ಹಾಗೂ ಶುಚಿತ್ವದ ಕೊರತೆ ಅಲ್ಲದೆ, ಉತ್ತಮ ತರಬೇತಿದಾರರೂ ಸಹ ಇಲ್ಲದಿರುವುದು, ಇರುವ ಒಬ್ಬ ತರಬೇತಿದಾರರನ್ನು ತೆಗೆದುಹಾಕಿರುವ ಬಗ್ಗೆ ದೂರು ನೀಡಿರುವರೆ ;

(ಉ) ಈ ಕ್ರೀಡಾ ವಸತಿ ಶಾಲೆಯ ಸಮಗ್ರ ಅಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಗುತ್ತಿಗೆದಾರರಿಂದ ಬಾಕಿ, ದಂಡ ವಸೂಲು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೧೬೩೮ (೨೦೩೨) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಲಸಂಪನ್ಮೂಲ ಇಲಾಖೆ ಯಾವ್ಯಾವ ಗುತ್ತಿಗೆದಾರರ ವಿರುದ್ಧ ಕೋಟ್ಯಾಂತರ ಹಣ ಬಾಕಿ ದಂಡ ವಸೂಲಿ ಮತ್ತಿತರೆ ವಿಷಯಗಳಿಗಾಗಿ ಮೊಕದ್ದಮೆಗಳನ್ನು ದಾಖಲಿಸಿರುತ್ತದೆ ; (ಗುತ್ತಿಗೆದಾರರ ಹೆಸರು, ದಾವೆ ಕಾರಣ, ಹಣದ ವಿವರಗಳನ್ನು ನೀಡುವುದು)

(ಆ) ಯಾವ ಅವಧಿಯಿಂದ ಈ ಮೊಕದ್ದಮೆಗಳನ್ನು ಬಾಕಿ ಇಡಲಾಗಿದೆ ; ಬಾಕಿ ಇಡಲು ಕಾರಣಗಳೇನು ;

(ಇ) ಸರ್ಕಾರಕ್ಕೆ ಬರಬೇಕಾಗಿರುವ ಬಾಕಿ ದಂಡಗಳನ್ನು ಯಾವ ಅವಧಿಯೊಳಗೆ ವಸೂಲಿ ಮಾಡಲಾಗುವುದು ?



## ಜಮಖಂಡಿ ತಾಲ್ಲೂಕಿನ ಚಿಕ್ಕಾಲಕಿ ಏತ ನೀರಾವರಿ ಕಾಮಗಾರಿ ಕುರಿತು

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೪೯ (೨೦೭೪) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆ ಜಿಲ್ಲೆಯ ಚಿಕ್ಕಾಲಕಿ ಏತನೀರಾವರಿ ಕಾಮಗಾರಿಯ ಪ್ರಗತಿ ಯಾವ ಹಂತದಲ್ಲಿದೆ ; (ವಿವರ ನೀಡುವುದು) ಕಾಮಗಾರಿ ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು ; ಕಾಮಗಾರಿಯನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸುವ ಕರಾರಿನ ಮೇಲೆ ಗುತ್ತಿಗೆ ನೀಡಲಾಗಿದೆ ;

(ಆ) ನೀರು ಹಂಚುಗಾವಲಿಗಳನ್ನು ತೇದಲಬಾಗಿ ಗ್ರಾಮದ ರಿ.ಸ.ಸಂ. ೧೭೬ ರವರೆಗೆ ಅಂದರೆ ಆ ಗ್ರಾಮದಕೊನೆ ಸರಹದ್ದಿನವರೆಗೆ ತಲುಪಿಸುವ ಯೋಜನೆ ಸರ್ಕಾರದ ಮುಂದೆ ಇದೆಯೇ ; ಹಾಗಿದ್ದಲ್ಲಿ, ಇದರಿಂದ ಆ ಗ್ರಾಮದ ಹೆಚ್ಚಿನ ಜಮೀನುಗಳಿಗೆ ನೀರಾವರಿ ಸೌಲಭ್ಯದೊರೆಯಲಿದೆಯೇ ;

(ಇ) ಕಾಲುವೆಯ ಕಾಮಗಾರಿಗಳನ್ನು ಮೊದಲು ಮಾಡಿ, ಜಾಕವೆಲ್ಲ್ ಕಾಮಗಾರಿ ತಡ ಮಾಡುವ ಉದ್ದೇಶವೇನು ?

## ಪ್ರತಿಭಾವಂತ ಕ್ರೀಡಾ ಪಟುಗಳನ್ನು ಸರ್ಕಾರಿ ಇಲಾಖೆಗಳಲ್ಲಿ ನೇಮಕಾತಿ ಕುರಿತು

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೪೦ (೨೦೮೨) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ಹಾಗೂ ಅಂತರಾಷ್ಟ್ರೀಯ ಪ್ರಶಸ್ತಿಗಳನ್ನು ಪಡೆದ ಪ್ರತಿಭಾವಂತ ಕ್ರೀಡಾಪಟುಗಳಿಗೆ ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ನೇಮಕಾತಿ ಮಾಡಿಕೊಳ್ಳುವ (ಸ್ಥಳ ಕಾಯ್ದಿರಿಸುವ) ಅವಕಾಶ ಇದೆಯೇ ; ಇಲ್ಲದಿದ್ದಲ್ಲಿ, ಅಂತಹ ಅವಕಾಶ ಒದಗಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ರಾಜ್ಯ ಸರ್ಕಾರ ಕ್ರೀಡಾಪಟುಗಳಿಗೆ ನೀಡುತ್ತಿರುವ ಏಕಲವ್ಯ, ರಾಜ್ಯೋತ್ಸವ ಮತ್ತು ರಾಷ್ಟ್ರೀಯ ಮತ್ತು ಅಂತರ್‌ರಾಷ್ಟ್ರೀಯ ಪ್ರಶಸ್ತಿ ಪಡೆದ ಕ್ರೀಡಾಪಟುಗಳಿಗೆ ನೀಡುವ ನಗದು ಹಣವನ್ನು ನೀಡುವಾಗ ರಾಜ್ಯದಲ್ಲಿಯೇ ಹುಟ್ಟಿ ನಮ್ಮ ಕ್ರೀಡಾ ವಸತಿ ಶಾಲೆಯಲ್ಲಿ ತರಬೇತಿ ಪಡೆದು ಈಗ ಭಾರತೀಯ ಸೇನೆ ರೈಲ್ವೆ ಇಲಾಖೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಕ್ರೀಡಾಪಟುಗಳನ್ನು ಪರಿಗಣಿಸಲಾಗುವುದೇ ?



## ಕೈಮಗ್ಗ ಮತ್ತು ವಿದ್ಯುತ್ ಚಾಲಿತ ಮಗ್ಗಗಳ ಕೆಲಸಗಾರರ ಕೂಲಿ ಕುರಿತು

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೪೧ (೨೦೮೧) ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೈಮಗ್ಗ ಮತ್ತು ವಿದ್ಯುತ್ ಚಾಲಿತ ಮಗ್ಗಗಳ ಮೇಲೆ ಕೆಲಸ ಮಾಡುವ ನೇಕಾರರು ತಮ್ಮ ದುಡಿಮೆಗೆ ತಕ್ಕಂತೆ ಕೂಲಿಗಾಗಿ ಹೋರಾಟ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ನೇಕಾರರು ಮತ್ತು ಮಾಲೀಕರ ನಡುವೆ ಸಂಧಾನ ಮಾಡಿಸಲು ಸರ್ಕಾರ ಕೈಗೊಂಡ ಕ್ರಮಗಳಾವುವು ;

(ಆ) ಜವಳಿ ಇಲಾಖೆಯ ನೇಕಾರರಿಗೆ ನಿಗಧಿಪಡಿಸಿದ ಕನಿಷ್ಠ ಕೂಲಿ ದರಗಳನ್ನು ಕೈಮಗ್ಗ ಮತ್ತು ವಿದ್ಯುತ್ ಚಾಲಿತ ನೇಕಾರರಿಗೆ ಯಾವ ಯಾವ ದರ ನಿಗಧಿಯಾಗಿದೆ ; (ವಿವರ ನೀಡುವುದು) ಈ ದರಗಳನ್ನು ಎಷ್ಟು ವರ್ಷಗಳಲ್ಲಿ ಮತ್ತು ಯಾವ ಪ್ರಮಾಣದಲ್ಲಿ ಪುನರ್ ಪರಿಶೀಲಿಸಿ ಹೆಚ್ಚಿಸಲು ಇರುವ ಮಾನದಂಡಗಳಾವುವು ?

## ನೋಂದಣಿ ಮತ್ತು ಮುದ್ರಾಂಕಗಳ ಇಲಾಖೆ ವರ್ಗಾವಣೆ ಮಾಡುವ ಕುರಿತು

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೪೨ (೨೦೩೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುವ ಗ್ರೂಪ್ 'ಸಿ' ನೌಕರರ ವರ್ಗಾವಣೆಗೆ ಸಕ್ಷಮ ಪ್ರಾಧಿಕಾರ ಯಾವುದು ;

(ಆ) "ಸಾರ್ವತ್ರಿಕ ವರ್ಗಾವಣೆ" ಸಮಯದಲ್ಲಿ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಿಗೆ ವರ್ಗಾವಣೆ ಮಾಡುವ ಅಧಿಕಾರ ಇದೆಯೇ ; (ಸಂಪೂರ್ಣ ವಿವರ ನೀಡುವುದು)

(ಇ) ನೋಂದಣಿ ಮುದ್ರಾಂಕ ಇಲಾಖೆಯಲ್ಲಿ (Department Enquiry) ಇರುವ ಗ್ರೂಪ್ "ಎ.ಬಿ.ಸಿ" ನೌಕರರ ಸಂಖ್ಯೆ ಎಷ್ಟು ; (ಹೆಸರು ಮತ್ತು ಹುದ್ದೆ ಸಹಿತ ಮಾಹಿತಿ ನೀಡುವುದು)

(ಈ) ಇಲಾಖೆಯಲ್ಲಿ ಪ್ರಥಮ/ದ್ವಿತೀಯ ದರ್ಜೆ ಸಹಾಯಕರುಗಳಿಗೆ ಮುಂಬಡ್ತಿ ನೀಡಿರುವುದು ಯಾವಾಗ ; ಇದುವರೆಗೂ ಮುಂಬಡ್ತಿ ನೀಡದೇ ಇರಲು ಕಾರಣಗಳೇನು ? (ವಿವರ ನೀಡುವುದು)



## ಕರ್ನಾಟಕ ನೀರಾವರಿ ನಿಗಮದ ಕಚೇರಿಯನ್ನು ಬೆಂಗಳೂರಿನಿಂದ ಬೆಳಗಾವಿಗೆ ಸ್ಥಳಾಂತರಿಸುವ ಕುರಿತು

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೧೬೪೩ (೨೦೩೭) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ನೀರಾವರಿ ನಿಗಮದಡಿ ಯಾವ–ಯಾವ ಪ್ರೊಜೆಕ್ಟ್ ಕೆಲಸಗಳು ಬರುತ್ತವೆ ; (ಪೂರ್ಣ ವಿವರ ನೀಡುವುದು)

(ಆ) ಎಲ್ಲ ಪ್ರೊಜೆಕ್ಟ್ ಕೆಲಸಗಳು ಉತ್ತರ ಕರ್ನಾಟಕದ ನೀರಾವರಿಗೆ ಸಂಬಂಧವಿದ್ದರೂ ಮುಖ್ಯ ಕಚೇರಿ ಮಾತ್ರ ಬೆಂಗಳೂರಿನಲ್ಲಿ ಇರುವುದು ನಿಜವೇ ;

(ಇ) ಹಿಂದಿನ ಮುಖ್ಯಮಂತ್ರಿಗಳಾಗಿದ್ದ ಶ್ರೀ ಗುಂಡೂರಾವ್‌ರವರು ಜನರಿಗೆ ಅನುಕೂಲವಾಗುವ ದೃಷ್ಟಿಯಿಂದ ಈ ಭಾಗಕ್ಕೆ ಸಂಬಂಧಿಸಿದಂತೆ ರಾಜ್ಯ ಮಟ್ಟದ ಕಚೇರಿಗಳನ್ನು ಬೆಳಗಾವಿಗೆ ಸ್ಥಳಾಂತರಿಸಿದ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಕೇವಲ ಕೆಲವು ಅಧಿಕಾರಿಗಳ ಅನುಕೂಲತೆಗಾಗಿ ಈ ಕಚೇರಿಯು ಬೆಂಗಳೂರಿನಲ್ಲಿರುವುದು ಸರಿಯೇ ;

(ಉ) ಈ ಕಚೇರಿ ಬೆಂಗಳೂರಿನಲ್ಲಿ ಇರುವುದರಿಂದ ಸಾರ್ವಜನಿಕರು ಹೋಗಿ ಬರಲು ತುಂಬಾ ತೊಂದರೆ ಆಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಕಚೇರಿ ಅಧೀನದಲ್ಲಿ ಬರುವ ಮಲಪ್ರಭಾ, ಘಟಪ್ರಭಾ, ಕೃಷ್ಣ ಮೊದಲಾದ ಪ್ರೊಜೆಕ್ಟ್‌ಗಳ ಎಷ್ಟು ಕೆಲಸಗಳು ಪೆಂಡಿಂಗ್ ಇರುತ್ತವೆ ;

(ಋ) ಈ ಕಚೇರಿ ಬೆಂಗಳೂರಿನಲ್ಲಿ ಇರುವುದರಿಂದ ಎಷ್ಟೊ ವರ್ಷಗಳ ಹಿಂದೆ ಮಂಜೂರಾದ ಚಚಡಿ–ಮುರಗೋಡ ಏತ ನೀರಾವರಿ ಯೋಜನೆಯನ್ನು ಕೈಗೊಳ್ಳದೆ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಎ) ಸಾರ್ವಜನಿಕರ ಹಿತದೃಷ್ಟಿಯಿಂದ ರಾಜ್ಯದ ೨ನೇ ರಾಜಧಾನಿಯೆನಿಸಿರುವ ಮತ್ತು ಸುವರ್ಣ ವಿಧಾನಸೌಧ ಹೊಂದಿರುವ ಬೆಳಗಾವಿಗೆ ಕರ್ನಾಟಕ ನೀರಾವರಿ ನಿಗಮ ಕಚೇರಿಯನ್ನು ಸ್ಥಳಾಂತರಗೊಳಿಸಲಾಗುವುದೇ ?

## ಮಲಪ್ರಭಾ ನದಿಯಿಂದ ಸವದತ್ತಿ ತಾಲ್ಲೂಕಿನ ನದಿಯ ದಂಡೆಯ ಮೇಲೆ ಇರುವ ಗ್ರಾಮಗಳ ಕೆರೆಗೆ ನೀರು ಒದಗಿಸುವ ಬಗ್ಗೆ.

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೧೬೪೪ (೨೦೩೮) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆ ಸವದತ್ತಿ ತಾಲ್ಲೂಕಿನ ಗ್ರಾಮಗಳ ಕೆರೆಗಳು ಮಲಪ್ರಭಾ ನದಿಯಿಂದ ಅತಿ ಸಮೀಪದಲ್ಲಿ ಇದ್ದ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಕೆರೆಗಳಿಗೆ ನದಿಯಿಂದ ನೀರು ಬಿಡಬೇಕು ಎಂದು ಮಾನ್ಯ ಜಲಸಂಪನ್ಮೂಲ ಸಚಿವರಲ್ಲಿ ಪತ್ರ ಬರೆದು ವಿನಂತಿಸಿಕೊಂಡಿದ್ದು ಈಗ ಅದು ಯಾವ ಹಂತದಲ್ಲಿರುತ್ತದೆ ;



(ಇ) ಯಾವ ಯಾವ ಕೆರೆಗಳಿಗೆ ನೀರು ಬಿಡಲು ಕೋರಲಾಗಿದೆ ; (ಗ್ರಾಮದ ಕೆರೆಗಳ ಹೆಸರು ನೀಡುವುದು)

(ಈ) ಕೋರಿಕೆಯಂತೆ ಯಾವ ಯಾವ ಗ್ರಾಮದ ಕೆರೆಗಳಿಗೆ ನದಿಯಿಂದ ನೀರು ಬಿಡಲು ಕ್ರಮ ಕೈಗೊಳ್ಳಲಾಗಿದೆ ; ಕೆಲಸವು ಯಾವ ಹಂತದಲ್ಲಿರುತ್ತದೆ ;

(ಉ) ಈ ಯೋಜನೆ ಕೈಗೊಳ್ಳುವುದರಿಂದ ಕುಡಿಯುವ ನೀರಿನ ಸಮಸ್ಯೆ ಕಡಿಮೆಯಾಗಿ ಹಾಗೂ ಕೊಳವೆ ಬಾವಿಗಳ ನೀರಿನ ಸಾಮರ್ಥ್ಯ ಹೆಚ್ಚಾಗುವುದಲ್ಲದೆ ಜಮೀನು ಕಳೆದುಕೊಂಡ ಜನರಿಗೆ ನೀರಾವರಿ ಸೌಲಭ್ಯವಾಗುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಈ ಯೋಜನೆ ಕೈಗೊಳ್ಳುವುದರಿಂದ ಎಷ್ಟು ಎಕರೆ ಜಮೀನು ನೀರಾವರಿಗೆ ಒಳಪಡುವುದು ಹಾಗೂ ಯಾವ ಯಾವ ಗ್ರಾಮಗಳಿಗೆ ನೀರಾವರಿ ಸೌಕರ್ಯವಾಗುವುದು ?

## ಮಲಪ್ರಭಾ ನದಿಯಿಂದ ಬೈಲಹೊಂಗಲ ತಾಲ್ಲೂಕಿನ ನದಿಯ ದಂಡೆಯ ಮೇಲೆ ಇರುವ ಗ್ರಾಮಗಳ ಕೆರೆಗೆ ನೀರು ಒದಗಿಸುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೧೬೪೫ (೨೦೩೫) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ಗ್ರಾಮಗಳ ಕೆರೆಗಳು ಮಲಪ್ರಭಾ ನದಿಯಿಂದ ಅತೀ ಸಮೀಪದಲ್ಲಿ ಇದ್ದ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಕೆರೆಗಳಿಗೆ ನದಿಯಿಂದ ನೀರು ಬಿಡಬೇಕು ಎಂದು ಮಾನ್ಯ ಜಲಸಂಪನ್ಮೂಲ ಸಚಿವರಲ್ಲಿ ದಿನಾಂಕ : ೨೪-೦೪-೨೦೧೪ ರಂದು ಪತ್ರ ಬರೆದು ವಿನಂತಿಸಿಕೊಂಡಿದ್ದು, ಈಗ ಅದು ಯಾವ ಹಂತದಲ್ಲಿದೆ ;

(ಇ) ಯಾವ ಯಾವ ಕೆರೆಗಳಿಗೆ ನೀರು ತುಂಬಿಸಬೇಕು ಎಂದು ಕೋರಲಾಗಿದೆ ; (ಗ್ರಾಮದ ಕೆರೆಗಳ ಹೆಸರು ನೀಡುವುದು)

(ಈ) ಕೋರಿಕೆಯಂತೆ ಯಾವ ಯಾವ ಗ್ರಾಮದ ಕೆರೆಗಳಿಗೆ ನದಿಯಿಂದ ನೀರು ಬಿಡಲು ಕ್ರಮ ಕೈಗೊಳ್ಳಲಾಗಿದೆ ; ಈ ಕಾರ್ಯವು ಯಾವ ಹಂತದಲ್ಲಿರುತ್ತದೆ ;

(ಉ) ಈ ಯೋಜನೆ ಕೈಗೊಳ್ಳುವುದರಿಂದ ಕುಡಿಯುವ ನೀರಿನ ಸಮಸ್ಯೆ ಕಡಿಮೆಯಾಗಿ ಹಾಗೂ ಕೊಳವೆ ಬಾವಿಗಳ ನೀರಿನ ಸಾಮರ್ಥ್ಯ ಹೆಚ್ಚಾಗುವುದಲ್ಲದೆ ಜಮೀನು ಕಳೆದುಕೊಂಡ ಜನರಿಗೆ ನೀರಾವರಿ ಸೌಲಭ್ಯವಾಗುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಈ ಯೋಜನೆ ಕೈಗೊಳ್ಳುವುದರಿಂದ ಎಷ್ಟು ಎಕರೆ ಜಮೀನು ನೀರಾವರಿಗೆ ಒಳಪಡುವುದು ಹಾಗೂ ಯಾವ ಯಾವ ಗ್ರಾಮಗಳಿಗೆ ನೀರಾವರಿ ಸೌಕರ್ಯವಾಗುವುದು ತಿಳಿಸುವುದು ?

## ಮಲಪ್ರಭಾ ನದಿಯಿಂದ ಖಾನಾಪೂರ ತಾಲ್ಲೂಕಿನ ನದಿಯ ದಂಡೆಯ ಮೇಲೆ ಇರುವ ಗ್ರಾಮಗಳ ಕೆರೆಗೆ ನೀರು ಬಿಡುವ ಬಗ್ಗೆ.

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ):-**

೧೬೪೬ (೨೦೩೬)ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಳಗಾವಿ ಜಿಲ್ಲೆ ಖಾನಾಪೂರ ತಾಲ್ಲೂಕಿನ ಗ್ರಾಮಗಳ ಕೆರೆಗಳು ಮಲಪ್ರಭಾ ನದಿಯಿಂದ ಅತೀ ಸಮೀಪದಲ್ಲಿ ಇದ್ದ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;



(ಆ) ಈ ಕೆರೆಗಳಿಗೆ ನದಿಯಿಂದ ನೀರು ಬಿಡಬೇಕು ಎಂದು ಮಾನ್ಯ ಜಲಸಂಪನ್ಮೂಲ ಸಚಿವರಲ್ಲಿ ಪತ್ರ ಬರೆದು ವಿನಂತಿಸಿಕೊಂಡಿದ್ದು ಈಗ ಅದು ಯಾವ ಹಂತದಲ್ಲಿದೆ ;

(ಇ) ಯಾವ-ಯಾವ ಕೆರೆಗಳಿಗೆ ನೀರು ತುಂಬಿಸಬೇಕು ಎಂದು ಕೋರಲಾಗಿದೆ ; (ಗ್ರಾಮದ ಕೆರೆಗಳ ಹೆಸರು ನೀಡುವುದು)

(ಈ) ಕೋರಿಕೆಯಂತೆ ಯಾವ-ಯಾವ ಗ್ರಾಮದ ಕೆರೆಗಳಿಗೆ ನದಿಯಿಂದ ನೀರು ಬಿಡಲು ಕ್ರಮಕೈಗೊಳ್ಳಲಾಗಿದೆ ; ಈಗ ಈ ಕಾರ್ಯ ಯಾವ ಹಂತದಲ್ಲಿರುತ್ತದೆ ;

(ಉ) ಈ ಯೋಜನೆ ಕೈಗೊಳ್ಳುವುದರಿಂದ ಕುಡಿಯುವ ನೀರಿನ ಸಮಸ್ಯೆ ಕಡಿಮೆಯಾಗಿ ಹಾಗೂ ಕೊಳವೆ ಬಾವಿಗಳ ನೀರಿನ ಸಾಮರ್ಥ್ಯ ಹೆಚ್ಚಾಗುವುದಲ್ಲದೆ, ಜಮೀನು ಕಳೆದುಕೊಂಡ ಜನರಿಗೆ ನೀರಾವರಿ ಸೌಲಭ್ಯವಾಗುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಈ ಯೋಜನೆ ಕೈಗೊಳ್ಳುವುದರಿಂದ ಎಷ್ಟು ಎಕರೆ ಜಮೀನು ನೀರಾವರಿಗೆ ಒಳಪಡುವುದು ಹಾಗೂ ಯಾವ ಯಾವ ಗ್ರಾಮಗಳಿಗೆ ನೀರಾವರಿ ಸೌಕರ್ಯವಾಗುವುದು ತಿಳಿಸುವುದು ?

## ಅರಣ್ಯ ವಸತಿಗೃಹಗಳು ಮತ್ತು ವಿಹಾರಧಾಮ ನಿಯಮಿತ ಇದರ ವಿವರ

**ಶ್ರೀ ಪಟೇಲ್ ಶಿವರಾಂ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೬೪೭ (೨೦೪೦)ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವಸತಿಗೃಹಗಳು ಮತ್ತು ವಿಹಾರಧಾಮ ನಿಯಮಿತದಲ್ಲಿ ಒಟ್ಟು ಇರುವ ಸಿಬ್ಬಂದಿಗಳೆಷ್ಟು ;

(ಆ) ಈ ಸಿಬ್ಬಂದಿಗಳಲ್ಲಿ ಐಎಫ್‌ಎಸ್ ಅಧಿಕಾರಿಗಳು ಯಾವ ಯಾವ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಇನ್ನಿತರ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿರುವ ಹುದ್ದೆಗಳ ವಿವರ ನೀಡುವುದು;

(ಇ) ಈ ಅರಣ್ಯ ವಸತಿಗೃಹಗಳು ಮತ್ತು ವಿಹಾರಧಾಮದಲ್ಲಿ ವರ್ಷಕ್ಕೆ ಖರ್ಚಾಗುತ್ತಿರುವ ಹಣವೆಷ್ಟು; (ಅಧಿಕಾರಿಗಳ/ಸಿಬ್ಬಂದಿಗಳ ಸಂಬಳ/ ಸಾರಿಗೆ ಇತರೆ ಭತ್ಯೆಗಳನ್ನು ಪ್ರತ್ಯೇಕವಾಗಿ ವಿವರ ನೀಡುವುದು)

(ಈ) ಸದರಿ ನಿಗಮದ ವ್ಯಾಪ್ತಿಗೆ ಬರುವ ವಸತಿ ಅತಿಥಿಗೃಹಗಳ ಸಂಖ್ಯೆ ಎಷ್ಟು; ಇವುಗಳಿಂದ ನಿಗಮಕ್ಕೆ ಬರುತ್ತಿರುವ ಆದಾಯವೆಷ್ಟು; (ಸಂಪೂರ್ಣ ವಿವರ ನೀಡುವುದು)

(ಉ) ಈ ನಿಗಮಕ್ಕೆ ಸೇರಿದ ಕೆಲವು ಅತಿಥಿಗೃಹಗಳನ್ನು ಖಾಸಗಿಯವರಿಗೆ ವಹಿಸಲಾಗಿದೆಯೇ; ಆಗಿದ್ದಲ್ಲಿ ಅವುಗಳು ಯಾವುವು; (ವಿವರ ನೀಡುವುದು)

(ಊ) ಇಂತಹ ಒಂದು ಚಿಕ್ಕ ನಿಗಮವನ್ನು ಮುನ್ನಡೆಸಲು ಇಷ್ಟೊಂದು ಐಎಫ್‌ಎಸ್ ಅಧಿಕಾರಿಗಳು/ಇತರೆ ಅಧಿಕಾರಿಗಳ ಅಗತ್ಯತೆ ಇದೆಯೇ ; ಇದರಿಂದ ಸರ್ಕಾರಕ್ಕೆ ಆಗುತ್ತಿರುವ ನಷ್ಟದ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ? (ವಿವರ ನೀಡುವುದು)



## ಹುಲಿಯೋಜನೆ ನಿಷೇಧಿತ ಪ್ರದೇಶಗಳಲ್ಲಿ ಹುಲಿ ಯೋಜನೆ ಸಂರಕ್ಷಣೆ ಕುರಿತು.

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):–**

೧೬೪೮ (೨೦೪೫)ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ರಾಜ್ಯದ ಅರಣ್ಯ ಇಲಾಖೆಯ ವಿವಿಧ ಕಾಡುಗಳಲ್ಲಿರುವ ಆನೆ ಮತ್ತು ಹುಲಿಗಳ ಸಂಖ್ಯೆ ಎಷ್ಟು ; ಯಾವ ಯಾವ ಪ್ರದೇಶಗಳಲ್ಲಿ ಆನೆ ಮತ್ತು ಹುಲಿಗಳನ್ನು ಗುರುತಿಸಲಾಗಿದೆ ; (ವಿವರ ನೀಡುವುದು)

(ಆ) ಹುಲಿಯೋಜನೆ ನಿಷೇಧಿತ ಪ್ರದೇಶಗಳಲ್ಲಿ ಹುಲಿ ಯೋಜನೆಯ ಸಂರಕ್ಷಣೆ ಪ್ರದೇಶಗಳಾವುವು ; ಈ ಪ್ರದೇಶದಲ್ಲಿರುವ ಹುಲಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಹುಲಿಯೋಜನೆ ಜಾರಿಗೆ ಬಂದು ಎಷ್ಟು ವರ್ಷಗಳಾದವು ಈ ಯೋಜನೆಗೆ ಸರ್ಕಾರವು ಒದಗಿಸಿದ ಅನುದಾನ ಎಷ್ಟು ; ಖರ್ಚು ಮಾಡಿದ ಅನುದಾನ ಎಷ್ಟು ? (ವಿವರ ನೀಡುವುದು)

## ಅರಣ್ಯ ನಿಷೇಧಿತ ಪ್ರದೇಶಗಳಲ್ಲಿ ವಾಸಿಸುತ್ತಿರುವ ಕುಟುಂಬಗಳನ್ನು ಪುನರ್ ವಸತಿಗೊಳಿಸುವ ಬಗ್ಗೆ.

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):–**

೧೬೪೯ (೨೦೪೬)ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ಅರಣ್ಯ ನಿಷೇಧಿತ ಪ್ರದೇಶಗಳಲ್ಲಿ ವಾಸಿಸುತ್ತಿರುವ ಕುಟುಂಬಗಳನ್ನು ಪುನರ್ ವಸತಿಗೊಳಿಸುವ ಯೋಜನೆ ಸರ್ಕಾರದ ಮುಂದಿದೆಯೇ ಇದ್ದರೆ ಈ ಯೋಜನೆಗೆ ನೀಡಿದ ಮೊತ್ತ ಎಷ್ಟು ; ರಾಜ್ಯದಲ್ಲಿ ಎಷ್ಟು ಕುಟುಂಬಗಳಿಗೆ ಪುನರ್‌ವಸತಿ ಕಲ್ಪಿಸಲಾಗಿದೆ ;

(ಆ) ನಿರ್ವಸಿತ ಕುಟುಂಬಗಳಿಗೆ ನೀಡುವ ಪರಿಹಾರ ಧನ ಕನಿಷ್ಠ ೨೫ ಲಕ್ಷಕ್ಕೆ ಏರಿಸಬೇಕೆಂಬ ಕುಟುಂಬಗಳ ಬೇಡಿಕೆಯನ್ನು ಸರ್ಕಾರ ಪರಿಗಣಿಸುವುದೇ ;

(ಇ) ನಿರ್ವಸಿತರಾದ ಹೆಣ್ಣು ಮಕ್ಕಳಿಗೆ ಪರಿಹಾರ ನೀಡದೇ ಇರುವುದು ಸಮಂಜಸವೇ 'ಈ ಬಗ್ಗೆ ಇಲಾಖೆ ಕೈಗೊಂಡ ಕ್ರಮಗಳಾವುವು ?

## ಮಳೆ ಮತ್ತು ಸಿಡಿಲುನಿಂದ ಹಾನಿಯಾದ ಮನೆಗಳ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):–**

೧೬೫೦ (೨೦೪೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೪–೧೫ನೇ ಸಾಲಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಳೆ ಮತ್ತು ಸಿಡಿಲು ಬಡಿದು ಎಷ್ಟು ವ್ಯಕ್ತಿಗಳು ಸಾವನ್ನಪ್ಪಿದ್ದಾರೆ; ಮೃತಪಟ್ಟ ಜಾನುವಾರುಗಳ ಸಂಖ್ಯೆ ಎಷ್ಟು; ಎಷ್ಟು ಮನೆಗಳು ಹಾನಿಯಾಗಿವೆ; ಅವರಿಗೆ ನೀಡಿದ ಪರಿಹಾರ ಎಷ್ಟು; (ಪೂರ್ಣ ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಜಿಲ್ಲೆಗೆ ಮಳೆ, ಸಿಡಿಲು, ಬಿರುಗಾಳಿ ಪ್ರಕೃತಿ ವಿಕೋಪಕ್ಕೆ ಸ್ಪಂದಿಸಲು ಮತ್ತು ಪರಿಹಾರ ಕಾರ್ಯ ಕೈಗೊಳ್ಳಲು ೨೦೧೪–೧೫ನೇ ಸಾಲಿಗೆ ಬಿಡುಗಡೆ ಮಾಡಿದ ಅನುದಾನ ಎಷ್ಟು; ಉಂಟಾದ ನಷ್ಟ ಎಷ್ಟು; (ವಿವರ ನೀಡುವುದು)

(ಇ) ಮಳೆಹಾನಿಯಿಂದ ಸಂಪೂರ್ಣ ಮನೆ ಕಳೆದುಕೊಂಡಿರುವ ಸಂತ್ರಸ್ಥರಿಗೆ ಪುನರ್ ವಸತಿ ಕಲ್ಪಿಸಲು ಇಲಾಖೆ ಕೈಗೊಂಡಿರುವ ಕ್ರಮಗಳೇನು ?



## ಅರಣ್ಯ ಇಲಾಖೆಯಲ್ಲಿ ಕಳ್ಳ ಭೇಟೆ ನಿಯಂತ್ರಣ ಶಿಬಿರವನ್ನು ಕುರಿತು

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):–**

೧೬೫೧ (೨೦೪೭)ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ಅರಣ್ಯ ಇಲಾಖೆಯಲ್ಲಿರುವ ಕಳ್ಳ ಭೇಟೆ ನಿಯಂತ್ರಣ ಶಿಬಿರಗಳ ಸಂಖ್ಯೆ ಎಷ್ಟು ; ರಾಜ್ಯಾದ್ಯಾದಂತ ಕಳ್ಳ ಭೇಟೆ ದಾಖಲಾದ ಕೇಸುಗಳೆಷ್ಟು ; ಯಾವ ಯಾವ ಅಪರಾಧ ಪತ್ತೆ ಹಚ್ಚಲಾಗಿದೆ ;

(ಆ) ಕಳ್ಳಭೇಟೆ ನಿಯಂತ್ರಣ ಶಿಬಿರದಲ್ಲಿ ಎಷ್ಟು ಜನ ಕಾರ್ಮಿಕರು ಕಾರ್ಯ ನಿರ್ವಹಿಸುತ್ತಿದ್ದಾರೆ ; ಈ ಕಾರ್ಮಿಕರು ಇಲಾಖೆಯ ಸಿಬ್ಬಂದಿಗಳೇ ಇಲ್ಲದಿದ್ದರೆ ಅವರಿಗೆ ನೀಡುವ ಸಂಬಳ ಎಷ್ಟು ; (ವಿವರ ನೀಡುವುದು)

(ಇ) ಯಾವ ಯಾವ ಭಾಗಗಳಲ್ಲಿ ಕಳ್ಳಭೇಟೆ ನಿಯಂತ್ರಣ ಶಿಬಿರದಿಂದ ಪತ್ತೆ ಹಚ್ಚಲಾದ ಕಳ್ಳಭೇಟೆಗಾರರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಈ) ಆನೆಗಳ ಹಾವಳಿ ತಪ್ಪಿಸಲು ರೈಲು ಪಟ್ಟಿ ಮಾದರಿಯ ಬೇಲಿಗಳನ್ನು ರಚಿಸಲು ಇಲಾಖೆ ಖರ್ಚು ಮಾಡಿದ ಮೊತ್ತ ಎಷ್ಟು ; ಎಷ್ಟು ಪ್ರದೇಶದಲ್ಲಿ ಬೇಲಿಯನ್ನು ನಿರ್ಮಿಸಲು ಉದ್ದೇಶಿಸಲಾಗಿದೆ ; ಈ ಕಾರ್ಯ ಯಾವಾಗ ಪೂರ್ಣಗೊಳ್ಳುವುದು ?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆ ಸಣ್ಣ ಕೆರೆಗಳ ಬಗ್ಗೆ.

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು):–**

೧೬೫೭ (೨೦೪೮) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿರುವ ಸಣ್ಣ ಕೆರೆಗಳ ಸಂಖ್ಯೆ ಎಷ್ಟು ;

(ಆ) ಈ ಕೆರೆಗಳ ಅಭಿವೃದ್ದಿಗಾಗಿ ೨೦೧೪–೨೦೧೫ನೇ ಸಾಲಿನಲ್ಲಿ ಬಿಡುಗಡೆಯಾದ ಅನುದಾನ ಎಷ್ಟು ;

(ಇ) ಈ ಅನುದಾನದಿಂದ ಕೆರೆಗಳ ಅಭಿವೃದ್ಧಿ ಆಗಿದೆಯೇ ;

(ಈ) ಈ ಕೆರೆಗಳಿಂದ ರೈತರಿಗೆ ಅನುಕೂಲವಾಗಿದೆಯೇ ?

## ಕೃಷ್ಣ ಮೇಲ್ದಂಡೆ ಯೋಜನೆಗೆ ಕೇಂದ್ರ ಸರ್ಕಾರದಿಂದ ಮಂಜೂರಾದ ಅನುದಾನ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು):–**

೧೬೫೩ (೨೦೫೦) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷ್ಣ ಮೇಲ್ದಂಡೆ ಯೋಜನೆ ಅಡಿ ಕೇಂದ್ರ ಸರ್ಕಾರ AIDP ಯೋಜನೆಯಡಿಯಲ್ಲಿ ರಾಜ್ಯಕ್ಕೆ ಮಂಜೂರು ಮಾಡಿರುವ ಅನುದಾನ ಎಷ್ಟು ; (ಸಮಗ್ರ ಮಾಹಿತಿ ನೀಡುವುದು)

(ಆ) ಈ ಯೋಜನೆಯ ಅಡಿಯಲ್ಲಿ ಕೃಷ್ಣ ಮೇಲ್ದಂಡೆ ಯೋಜನೆಯ ಯಾವ ಯಾವ ಕಾಲುವೆಗೆ ಆಧುನೀಕರಣಗೊಳಿಸಲಾಗಿದೆ ; (ಪೂರ್ಣ ಮಾಹಿತಿ ನೀಡುವುದು)



(ಇ) ಕಳೆದ ೪ ವರ್ಷಗಳಿಂದ ಕೃಷ್ಣ ಮೇಲ್ದಂಡೆ ಯೋಜನೆಯ ಕಾಮಗಾರಿಗೆ ಬಿಡುಗಡೆಯಾದ ಅನುದಾನ ಎಷ್ಟು ; ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು ?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ನೆಮ್ಮದಿ ಕೇಂದ್ರಗಳು

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು):–**

೧೬೫೪ (೨೦೪೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ನೆಮ್ಮದಿ ಕೇಂದ್ರಗಳೆಷ್ಟು;

(ಆ) ಈ ನೆಮ್ಮದಿ ಕೇಂದ್ರಗಳಿಗೆ ಮೂಲಭೂತ ಸೌಕರ್ಯವನ್ನು ಒದಗಿಸಲಾಗಿದೆಯೇ;

(ಇ) ಈ ನೆಮ್ಮದಿ ಕೇಂದ್ರದಿಂದ ರೈತರು ಯಾವ ಯಾವ ಸೌಲಭ್ಯಗಳನ್ನು ಪಡೆದುಕೊಳ್ಳಬಹುದು ? (ವಿವರಿಸುವುದು)

## ರಾಜ ಕಾಲುವೆಗಳ ಒತ್ತುವರಿ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೬೫೫ (೨೦೫೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಮತ್ತು ಗ್ರಾಮಾಂತರದಲ್ಲಿ ಕಂದಾಯ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಕೆರೆಗಳ ಸಂಖ್ಯೆ ಎಷ್ಟು ; ಅವು ಯಾವುವು ;

(ಆ) ರಾಜ ಕಾಲುವೆಗಳ ಒತ್ತುವರಿಯಿಂದಾಗಿ ಹಾಗೂ ಮಳೆ ನೀರು ಹರಿದು ಹೋಗುವ ಮೋರಿಗಳ ಜಾಗ ಕಬಳಿಕೆಯಿಂದಾಗಿ ಒಳ ಚರಂಡಿ ನೀರು ನೇರ ಕೆರೆಗಳನ್ನು ಸೇರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬೆಂಗಳೂರಿನಲ್ಲಿ ತಲೆ ಎತ್ತಿರುವ ದೊಡ್ಡ ದೊಡ್ಡ ಅಪಾರ್ಟ್‌ಮೆಂಟ್‌ಗಳು, ಕೈಗಾರಿಕಾ ಘಟಕಗಳು ತ್ಯಾಜ್ಯವನ್ನು ಶುದ್ಧಿಕರಿಸದೆ ಕೆರೆಗೆ ಬಿಡುತ್ತಿದ್ದು, ಇದರಿಂದ ವಿಷಕಾರಿ ರಾಸಾಯನಿಕ ಅಂಶಗಳು ನೇರವಾಗಿ ಕೆರೆಗಳಿಗೆ ಸೇರುತ್ತಿರುವುದು ಸರ್ಕಾರ ಗಮನಿಸಿದೆಯೇ ;

(ಈ) ಹಾಗಿದ್ದಲ್ಲಿ, ಕಾಲುವೆಗಳ ಒತ್ತುವರಿದಾರರ ಮತ್ತು ವಿಷಕಾರಿ ರಾಸಾಯನಿಕ ತ್ಯಾಜ್ಯವನ್ನು ಕೆರೆಗೆ ಬಿಡುತ್ತಿರುವವರ ವಿರುದ್ಧ ಸರ್ಕಾರ ಯಾವ ರೀತಿಯ ಕ್ರಮಗಳನ್ನು ಕೈಗೊಂಡಿದೆ ? (ಸಂಪೂರ್ಣ ವಿವರ ನೀಡುವುದು)

## ಕಟ್ಟಡ ನಿರ್ಮಾಣ ಕಾರ್ಮಿಕರಿಗೆ ನೀಡುತ್ತಿರುವ ಸವಲತ್ತುಗಳು

**ಶ್ರೀಮತಿ ವಿಮಲಾಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೬೫೬ (೨೦೫೪) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೨ ವರ್ಷಗಳಲ್ಲಿ ರಾಜ್ಯದಲ್ಲಿ ಕಟ್ಟಡ ನಿರ್ಮಾಣದ ಕಾಮಗಾರಿಗಳಲ್ಲಿ ಸಂಭವಿಸಿದ ಕಟ್ಟಡ ದುರಂತಗಳೆಷ್ಟು ; ಈ ದುರಂತಗಳಲ್ಲಿ ಸಾವು ನೋವು ಸಂಭವಿಸಿದ ಪ್ರಕರಣಗಳ ಸಂಖ್ಯೆ ಎಷ್ಟು ;

(ಆ) ಇಂತಹ ದುರಂತಗಳಲ್ಲಿ ಮಡಿದ ಕಾರ್ಮಿಕರ ಪ್ರತಿ ಕುಟುಂಬಗಳಿಗೆ ನೀಡುವ ಪರಿಹಾರ ಮೊತ್ತವೆಷ್ಟು ;



(ಇ) ಕಳೆದ ೨ ವರ್ಷಗಳಿಂದ ಸರ್ಕಾರ ಇಂತಹ ಕಾರ್ಮಿಕ ಕುಟುಂಬಗಳಿಗೆ ನೀಡಿರುವ ಪರಿಹಾರ ಎಷ್ಟು ?

## ಜಲಸಂಪನ್ಮೂಲ ಯೋಜನೆಗಳ ಅನುಷ್ಠಾನ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೬೫೭ (೨೦೫೬) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಜಲಸಂಪನ್ಮೂಲ ಇಲಾಖೆಯ ಯೋಜನೆಗಳನ್ನು ಅನುಷ್ಠಾನಗೊಳಿಸುವ ವಿಚಾರದಲ್ಲಿ ಇಲಾಖೆಗಳ ವಿಳಂಬ ಧೋರಣೆಯಿಂದ ಯೋಜನೆಗಳು ರಾಜ್ಯದ ಜನತೆಗೆ ಸರಿಯಾದ ಸಮಯಕ್ಕೆ ತಲುಪಲು ಸಾಧ್ಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು ;

(ಇ) ನೀರು ಸಂಗ್ರಹಣೆ ವಿತರಣೆ ಹಾಗೂ ಅದರ ನಿರ್ವಹಣೆಗೆ ಸರ್ಕಾರ ಯಾವ ರೀತಿಯ ಯೋಜನೆಗಳನ್ನು ರೂಪಿಸಿದೆ ?

## ಸಣ್ಣ ನೀರಾವರಿ ಯೋಜನೆಗಳು.

**ಶ್ರೀಮತಿ ವಿಮಲಾಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೬೫೮ (೨೦೫೩) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೨ ವರ್ಷಗಳಿಂದ ಇಲ್ಲಿಯವರೆಗೆ ಮಂಡ್ಯ ಮತ್ತು ಕೋಲಾರ ಜಿಲ್ಲೆಗಳಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಅನುಷ್ಠಾನ ಮಾಡಿರುವ ಕಾಮಗಾರಿಗಳಾವುವು ; ಅವುಗಳಿಗೆ

ಬಿಡುಗಡೆ ಮಾಡಿರುವ ಅನುದಾನವೆಷ್ಟು ; ವೆಚ್ಚ ಮಾಡಿರುವ ಮೊತ್ತವೆಷ್ಟು ; (ಕಾಮಗಾರಿವಾರು ವಿವರ ನೀಡುವುದು)

(ಆ) ಸದರಿ ಜಿಲ್ಲೆಗಳಲ್ಲಿ ಕುಡಿಯುವ ನೀರಿಗಾಗಿ ಕಾರ್ಯ-ರೂಪಗೊಂಡಿರುವ ಯೋಜನೆಗಳೆಷ್ಟು ? (ವಿವರ ನೀಡುವುದು)

## ಮಹಿಳಾ ಉದ್ಯೋಗಿಗಳಿಗೆ ನೀಡುವ ಸೌಲಭ್ಯಗಳ ಬಗ್ಗೆ.

**ಶ್ರೀಮತಿ ವಿಮಲಾಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೬೫೯ (೨೦೫೫) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಮತ್ತು ಸುತ್ತಮುತ್ತಲಿನ ಗಾರ್ಮೆಂಟ್‌ಗಳಿಗೆ ಬರುವ ಮಹಿಳಾ ಕಾರ್ಮಿಕರಿಗೆ ಮೂಲಭೂತ ಸೌಲಭ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇವರಿಗೆ ಪ್ರತಿ ನಿತ್ಯ ಓಡಾಡಲು ಸಾರಿಗೆ ವ್ಯವಸ್ಥೆ ಇಲ್ಲದೆ ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರ ಗಮನಿಸಿದೆಯೇ ;

(ಇ) ಕಾರ್ಮಿಕ ಮಂಡಳಿಗಳಲ್ಲಿ ಶೇಖರಣೆಯಾಗಿರುವ ಹಣ ಉಪಯೋಗಿಸಿಕೊಂಡು ಮಹಿಳಾ ಉದ್ಯೋಗಿಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಮುಂದಾಗುವುದೇ ? (ವಿವರ ನೀಡುವುದು)



## ರಾಜ್ಯದಲ್ಲಿರುವ ಕಾರ್ಮಿಕರಿಗೆ ಸರಕಾರದ ಯೋಜನೆಗಳು ತಲುಪದೆ ಇರುವ ಕುರಿತು.

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೬೦ (೨೦೬೨) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅಸಂಘಟಿತ ಕಟ್ಟಡ ಕಾರ್ಮಿಕರಿಗಾಗಿ ಜಾರಿ ಇರುವ ಯೋಜನೆಗಳು ಕಾರ್ಮಿಕರಿಗೆ ಸರಿಯಾಗಿ ತಲುಪದೆ ಇರುವ ವಿಚಾರ ಸರಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಬೆಳಗಾವಿ ಜಿಲ್ಲೆಯಲ್ಲಿ ಕಳೆದ ೨೦೧೨-೧೩, ೨೦೧೩-೧೪ ಹಾಗೂ ೨೦೧೪-೧೫ನೇ ಸಾಲಿನಲ್ಲಿ ಯಾವ ಯಾವ ಯೋಜನೆಗಳಿಂದ ಎಷ್ಟು ಜನ ಕಾರ್ಮಿಕರು ಲಾಭ ಪಡೆದುಕೊಳ್ಳುತ್ತಾರೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಕಾರ್ಮಿಕರ ಮಕ್ಕಳಿಗಾಗಿ ಇರುವ ಯೋಜನೆಯಡಿ ಎಷ್ಟು ವಿದ್ಯಾರ್ಥಿಗಳು ಈ ಯೋಜನೆಯ ಲಾಭ ಪಡೆದುಕೊಂಡಿದ್ದಾರೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಬೆಳಗಾವಿ ಜಿಲ್ಲೆಯಲ್ಲಿ ಎಷ್ಟು ಜನ ಅಸಂಘಟಿತ ಕಾರ್ಮಿಕರಿಗೆ ಗುರುತಿನ ಚೀಟಿಗಳನ್ನು ನೀಡಲಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಕೈಗಾರಿಕಾ ತರಬೇತಿ ಸ್ಥಾಪನೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೬೧ (೨೦೭೦) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೈಗಾರಿಕಾ ಕ್ರಾಂತಿ ಮಾಡುವ ಉದ್ದೇಶದಿಂದ ಕೈಗಾರಿಕಾ ಕ್ಷೇತ್ರದಲ್ಲಿ ಹಣ ಹೂಡಿಕೆಗೆ ಸರ್ಕಾರ ಪ್ರೋತ್ಸಾಹ ನೀಡುತ್ತಿರುವುದು ನಿಜವೇ ;

(ಆ) ಹಾಗಿದ್ದರೆ, ಕೈಗಾರಿಕೆ ತರಬೇತಿ ಪಡೆದ ಸಿಬ್ಬಂದಿಗಳ ಅವಶ್ಯಕತೆ ಬಗ್ಗೆ ಸರ್ಕಾರ ಸರ್ವೆ/ಅಂದಾಜು ಮಾಡಿಸಿದೆಯೇ ; (ವಿವರ ನೀಡುವುದು)

(ಇ) ಖಾಸಗಿ ಕೈಗಾರಿಕೆ ತರಬೇತಿ ಸಂಸ್ಥೆಗಳಿಗೆ ಸರ್ಕಾರ ಉತ್ತೇಜನ ನೀಡುವುದು ಅವಶ್ಯಕತೆ ಇದೆಯೇ ;

(ಈ) ಹೊಸ ತರಬೇತಿ ಸಂಸ್ಥೆ ಪ್ರಾರಂಭಿಸಲು ಮಾರ್ಗ ಸೂಚಿಗಳೇನು; ಅನುದಾನಕ್ಕೆ ಒಳಪಡಿಸಲು ನಿಬಂಧನೆಗಳೇನು ? (ವಿವರ ನೀಡುವುದು)

## ಭಾರತ ಸರ್ಕಾರ ಮಾರ್ಗಸೂಚಿ ಎ.ಐ.ಬಿ.ಪಿ. ಯೋಜನೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೬೨ (೨೦೬೪) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಭಾರತ ಸರ್ಕಾರ ಎ.ಐ.ಬಿ.ಪಿ. ಅಡಿ, ೨೦೧೪–೧೫ನೇ ಸಾಲಿನಲ್ಲಿ ಯೋಜನೆಯ ಹೊಸ ಮಾರ್ಗಸೂಚಿ



ನೀಡಿರುವಂತೆ ಯೋಜನೆಯ ಪ್ರಸ್ತಾವನೆಯನ್ನು ತಯಾರಿಸಿ ಕೇಂದ್ರ ಸರ್ಕಾರಕ್ಕೆ ಕಳುಹಿಸಲು ಸೂಚನೆ ಬಂದಿರುವುದು ನಿಜವೆ ;

(ಆ) ಹಾಗಿದ್ದರೆ, ಸೂಚನೆ ಬಂದ ದಿನಾಂಕ, ಪ್ರಸ್ತಾವನೆಯನ್ನು ಕೇಂದ್ರಕ್ಕೆ ಕಳುಹಿಸಿದ ದಿನಾಂಕ ಯೋಜನೆಯ ಗಾತ್ರ ಇತ್ಯಾದಿ ಎಲ್ಲಾ ವಿವರವನ್ನು ಸರ್ಕಾರ ನೀಡುವುದೇ ?

## ನದಿ, ಕೊಳಗಳಿಗೆ ಸರಣಿ ಪಿಕಪ್ ನಿರ್ಮಾಣ ಮಾಡುವ ಕುರಿತು

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೬೩ (೨೦೬೩) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಂತರ್ಜಲ, ಕುಸಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದರೆ, ಅಂತರ್ಜಲ ಹೆಚ್ಚಿಸಲು ನೈಸರ್ಗಿಕ ನದಿ, ಕೊಳಗಳಿಗೆ ಅಡ್ಡಲಾಗಿ ಸರಣಿ ಪಿಕಪ್ ನಿರ್ಮಿಸಲು ಸರ್ಕಾರ ಯೋಜನೆ ರೂಪಿಸಿದೆಯೇ ;

(ಇ) ಹಾಗಿದ್ದರೆ, ಕಳೆದ ೨ ವರ್ಷಗಳಲ್ಲಿ ಎಷ್ಟು ಸಂಖ್ಯೆ ಸರಣಿ ಪಿಕಪ್ ನಿರ್ಮಾಣ ಮಾಡಲಾಗಿದೆ ; ಇವುಗಳಿಗೆ ಕಾಯ್ದಿರಿಸಿದ ಹಣ ಮತ್ತು ಖರ್ಚಾದ ಹಣವೆಷ್ಟು ? (ಪೂರ್ಣ ವಿವರ ನೀಡುವುದು)

## ಉಡುಪಿ ಜಿಲ್ಲೆಯಲ್ಲಿನ ಸಣ್ಣ ನೀರಾವರಿ ಇಲಾಖಾ ವ್ಯಾಪ್ತಿಗೆ ಒಳಪಟ್ಟ ಕೆರೆಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೬೪ (೨೦೬೯) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಗೆ ಒಳಪಟ್ಟ ಕೆರೆಗಳ ಸಂಖ್ಯೆ ಎಷ್ಟು ; ಅವು ಯಾವುವು ; ಈ ಕೆರೆಗಳ ಒಟ್ಟು ವಿಸ್ತೀರ್ಣವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಉಡುಪಿ ಜಿಲ್ಲೆಯಲ್ಲಿನ ಸಣ್ಣ ನೀರಾವರಿ ಇಲಾಖೆ ವ್ಯಾಪ್ತಿಗೆ ಒಳಪಟ್ಟ ಕೆರೆಗಳಲ್ಲಿ ಒತ್ತುವರಿಯಾದ ಕೆರೆಗಳ ಸಂಖ್ಯೆ ಎಷ್ಟು ; ಮತ್ತು ಅವು ಯಾವುವು ; ಒತ್ತುವರಿಯಾದ ವಿಸ್ತೀರ್ಣವೆಷ್ಟು ; ಒತ್ತುವರಿ ಮಾಡಿದ ಉದ್ದೇಶವೇನು; ಒತ್ತುವರಿ ತೆರವುಗೊಳಿಸಲು ಇಲಾಖೆ ತೆಗೆದುಕೊಂಡ ಕ್ರಮಗಳೇನು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಉಡುಪಿ ಜಿಲ್ಲೆಯಲ್ಲಿನ ಸಣ್ಣ ನೀರಾವರಿ ಇಲಾಖೆ ವ್ಯಾಪ್ತಿಗೆ ಒಳಪಟ್ಟ ಕೆರೆಗಳ ಅಭಿವೃದ್ಧಿಗೆ ಕಳೆದ ೫ ವರ್ಷಗಳಲ್ಲಿ ವೆಚ್ಚ ಮಾಡಲಾದ ಅನುದಾನವೆಷ್ಟು ; (ತಾಲ್ಲೂಕುವಾರು, ಕೆರೆವಾರು, ವರ್ಷವಾರು ವಿವರ ನೀಡುವುದು)

(ಈ) ಉಡುಪಿ ಜಿಲ್ಲೆಯ ಸಣ್ಣ ನೀರಾವರಿ ಇಲಾಖೆಗೆ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ; ಕೊರತೆ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಈ ಕೊರತೆಯನ್ನು ತುಂಬಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;



(ಉ) ತಾಲ್ಲೂಕು ಮಟ್ಟದಲ್ಲಿ ಸಣ್ಣ ನೀರಾವರಿ ಇಲಾಖಾ ಕಚೇರಿಗಳು ಇಲ್ಲದಿರಲು ಕಾರಣವೇನು ; ಇದರಿಂದ ಸಣ್ಣ ನೀರಾವರಿ ಇಲಾಖಾ ಕಾರ್ಯಕ್ರಮಗಳ ಯಶಸ್ವಿ ಅನುಷ್ಠಾನ ಸಾಧ್ಯವಾಗದಿರುವುದನ್ನು ಸರ್ಕಾರ ಗಮನಿಸಿದೆಯೇ ; ಗಮನಿಸಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಉಡುಪಿ ಜಿಲ್ಲೆಯಲ್ಲಿ ಸಾಮಿಲ್ ಹಾಗೂ ಮರಕೊಯ್ಯುವ, ನುಣುಪು ಮಾಡುವ, ಸಿಗಿಯುವ ಘಟಕಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೬೫ (೨೦೬೬) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯಲ್ಲಿರುವ ಸಾಮಿಲ್ (ಮರಕೊಯ್ಯುವ ಗಿರಣಿ)ಗಳ ಒಟ್ಟು ಸಂಖ್ಯೆ ಎಷ್ಟು ; ಮತ್ತು ಯಾವುವು ; ಹಾಗೂ ಮರಕೊಯ್ಯುವ, ಸಿಗಿಯುವ ಮತ್ತು ನುಣುಪು ಮಾಡುವ (sawing and polishing) ಘಟಕಗಳ ಸಂಖ್ಯೆ ಎಷ್ಟು ; ಮತ್ತು ಯಾವುವು ; (ತಾಲ್ಲೂಕುವಾರು, ಗ್ರಾಮವಾರು ವಿವರ ನೀಡುವುದು)

(ಆ) ಉಡುಪಿ ಜಿಲ್ಲೆಯಲ್ಲಿರುವ ಪರವಾನಿಗೆ ಹೊಂದಿರುವ ಮತ್ತು ಪರವಾನಿಗೆ ಹೊಂದಿಲ್ಲದ ಸಾಮಿಲ್‌ಗಳ ಹಾಗೂ ಮರಕೊಯ್ಯುವ, ಸಿಗಿಯುವ ಮತ್ತು ನುಣುಪು ಮಾಡುವ ಘಟಕಗಳ ಸಂಖ್ಯೆ ಎಷ್ಟು ; ಅವು ಯಾವುವು ; (ತಾಲ್ಲೂಕುವಾರು, ಗ್ರಾಮವಾರು, ಪ್ರತ್ಯೇಕ, ಪ್ರತ್ಯೇಕವಾಗಿ ವಿವರ ನೀಡುವುದು)

(ಇ) ಪರವಾನಿಗೆ ಇಲ್ಲದೆ ಕಾರ್ಯನಿರ್ವಹಿಸುತ್ತಿರುವ ಸಾಮಿಲ್ ಹಾಗೂ ಮರಕೊಯ್ಯುವ, ಸಿಗಿಯುವ ಮತ್ತು ನುಣುಪು

ಮಾಡುವ ಘಟಕಗಳಿಗೆ ಪರವಾನಿಗೆಯ ಅವಶ್ಯಕತೆ ಇಲ್ಲವೆ; ಇದ್ದಲ್ಲಿ ಈ ರೀತಿಯಾಗಿ ಅರಣ್ಯ ಕಾಯಿದೆಗೆ ವಿರುದ್ಧವಾಗಿ ಕಾರ್ಯನಿರ್ವಹಿಸುತ್ತಿರುವ ಸಾಮಿಲ್ ಹಾಗೂ ಮರಕೊಯ್ಯುವ, ಸಿಗಿಯುವ ಮತ್ತು ನುಣುಪು ಮಾಡುವ ಘಟಕಗಳಿಗೆ ಪರವಾನಿಗೆ ಕಡ್ಡಾಯಗೊಳಿಸಲಾಗುವುದೇ ?

## ಉಡುಪಿ ಜಿಲ್ಲೆಯಲ್ಲಿ ಕಂದಾಯ ಇಲಾಖೆಯಿಂದ ಗಣಿಗಾರಿಕೆ ಎನ್.ಓ.ಸಿ. ಪಡೆದ ಪ್ರಕರಣಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೬೬ (೨೦೬೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯಲ್ಲಿ ಕೆಂಪುಕಲ್ಲು, ಅಲೆಕಲ್ಲು ಮತ್ತು ಮರಳು ಗಣಿಗಾರಿಕೆಗೆ ಕಂದಾಯ ಇಲಾಖೆಯಿಂದ ನಿರಾಕ್ಷೇಪಣಾ ಪತ್ರವನ್ನು ಪ್ರಕರಣವಾರು ಪಡೆಯಲಾಗುತ್ತಿದೆಯೇ ; ಇಲ್ಲವಾದಲ್ಲಿ ಕಾರಣವೇನು;

(ಆ) ಅಕ್ರಮವಾಗಿ ಕಂದಾಯ ಭೂಮಿಯಲ್ಲಿ ಕೆಂಪುಕಲ್ಲು ಮತ್ತು ಶಿಲೆಕಲ್ಲು ಗಣಿಗಾರಿಕೆ ಮಾಡುವುದನ್ನು ನಿಯಂತ್ರಿಸುವ ಹೊಣೆಯನ್ನು ಗ್ರಾಮಲೆಕ್ಕಾಧಿಕಾರಿಗಳು ಹಾಗೂ ಕಂದಾಯ ನಿರೀಕ್ಷಕರಿಗೆ ನೀಡಲಾಗುವುದೇ ; ಇಲ್ಲವಾದಲ್ಲಿ ಈ ಹೊಣೆಯನ್ನು ಯಾರಿಗೆ ವಹಿಸಲಾಗುವುದು ;

(ಇ) ಕುಂದಾಪುರ ತಾಲ್ಲೂಕಿನಲ್ಲಿ ಕಂದಾಯ ಇಲಾಖೆಯ ನಿರಾಪೇಕ್ಷಣ ಪತ್ರ ಪಡೆದು ಪ್ರಸಕ್ತ ಗಣಿಗಾರಿಕೆ ನಡೆಸುತ್ತಿರುವ



ಪರವಾನಿಗೆದಾರರು ಎಷ್ಟು ? (ಗ್ರಾಮವಾರು, ಪರವಾನಗಿದಾರರ ವಿವರ ನೀಡುವುದು)

## ರಾಜ್ಯದಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರಿಗೆ ಕಾಯ್ದಿರಿಸಿದ ಭೂಮಿಯ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೬೭ (೨೦೬೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಕಾಯ್ದಿರಿಸಿದ (ಡಿ.ಸಿ. ಮನ್ನಾ) ಭೂಮಿಯ ಒಟ್ಟು ವಿಸ್ತೀರ್ಣವೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಕಾಯ್ದಿರಿಸಿದ (ಡಿ.ಸಿ. ಮನ್ನಾ) ಭೂಮಿಯ ನೀತಿ ಮತ್ತು ನಿಯಮಗಳಲ್ಲಿ ಜಿಲ್ಲೆಯಿಂದ ಜಿಲ್ಲೆಗೆ ಹಾಗೂ ತಾಲ್ಲೂಕಿನಿಂದ ತಾಲ್ಲೂಕಿಗೆ ವ್ಯತ್ಯಾಸವಿದೆಯೇ; ವ್ಯತ್ಯಾಸವಿದ್ದಲ್ಲಿ ಕಾರಣವೇನು ಹಾಗೂ ಇರುವ ವ್ಯತ್ಯಾಸಗಳೇನು ;

(ಇ) ರಾಜ್ಯದ ಕರಾವಳಿ ಜಿಲ್ಲೆಗಳಲ್ಲಿ ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಕಾಯ್ದಿರಿಸಿದ (ಡಿ.ಸಿ. ಮನ್ನಾ) ನೀತಿ ನಿಯಮದಲ್ಲಿ ವ್ಯತ್ಯಾಸವಿದೆಯೇ ; ಇದ್ದಲ್ಲಿ ಕಾರಣವೇನು ; ಹಾಗೂ ಇರುವ ವ್ಯತ್ಯಾಸಗಳೇನು ? (ಪ್ರತಿಯನ್ನು ಒದಗಿಸುವುದು)

## ಘಟಪ್ರಭಾ ಎಡದಂಡೆ ಕಾಲುವೆಯ ಅರಭಾವಿ ಉಪಕಾಲುವೆಗೆ ನೀರು ಸಮರ್ಪಕವಾಗಿ ಹರಿಯದಿರುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೬೬೮ (೨೦೨೯) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಘಟಪ್ರಭಾ ಎಡದಂಡೆ ಕಾಲುವೆಯ ಅರಭಾವಿ ಉಪಕಾಲುವೆಗೆ ಸಮರ್ಪಕವಾಗಿ ನೀರು ಹರಿಯ ಬಿಟ್ಟಾಗ ಅರಭಾವಿ ಗ್ರಾಮದ ನಂತರ ಮುಂದಿನ ಜಮೀನುಗಳಿಗೆ ನೀರು ತಲುಪುತ್ತಿಲ್ಲದಿರುವುದು ನಿಜವೇ ;

(ಆ) ಇದಕ್ಕೆ ಕಾರಣವೇನು ; ಸದರಿ ಉಪಕಾಲುವೆಗೆ ಬಿಟ್ಟ ನೀರು ಕೊನೆಯವರೆಗೆ ಹರಿದ ವರ್ಷ ಯಾವುದು ;

(ಇ) ಈ ಸಂಬಂಧ ಯಾವ ಕ್ರಮಗಳನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆ?

## ಏತ ನೀರಾವರಿ ಯೋಜನೆ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೬೬೯ (೨೦೨೮) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕೋಡಿ ತಾಲ್ಲೂಕಿನ ಕರ್ನಾಟಕ ನೀರಾವರಿ ನಿಗಮದಿಂದ ಅನುಷ್ಠಾನಗೊಳಿಸಿರುವ ಕೊಟಬಾಗಿ ಏತನೀರಾವರಿ ಯೋಜನೆಯ ವ್ಯಾಪ್ತಿಯಲ್ಲಿ ಬರುವ ಕೊನೆಯಂಚಿನ ಗ್ರಾಮಗಳಾದ ಬಂಬಲವಾಡ, ಬೆಣ್ಣೆಹಳ್ಳಿ, ಬೆಳಕೂಡ ಮುಂತಾದ ಗ್ರಾಮಗಳಿಗೆ



ನೀರು ಹರಿಯುತ್ತಿಲ್ಲವೆನ್ನುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇದಕ್ಕೆ ಕಾರಣಗಳೇನು ; ಈ ಗ್ರಾಮಗಳನ್ನು ಸೇರುವ ಕಾಲುವೆಗಳ ತುಂಬ ಗಿಡಗಂಟೆಗಳು ಬೆಳೆದು ಹೂಳು ತುಂಬಿ ನೀರು ಹರಿಯಲು ತೊಂದರೆಯಾಗುತ್ತಿರುವುದು ನಿಜವೇ;

(ಇ) ನಿಜವಾಗಿದ್ದಲ್ಲಿ, ಇದನ್ನು ಸರಿಪಡಿಸಲು ಏನು ಕ್ರಮ ಕೈಗೊಳ್ಳಲಾಗಿದೆ;

(ಈ) ಸದರಿ ಕಾಲುವೆ ದುರಸ್ಥಿ ಕಾಮಗಾರಿಯನ್ನು ಪ್ರಧಾನ ಮಂತ್ರಿ ರೋಜಗಾರ್ ಯೋಜನೆಯಲ್ಲಿ ಕೈಗೆತ್ತಿಕೊಳ್ಳಲು ಸಾಧ್ಯವಿಲ್ಲವೇ;

(ಉ) ಸಾಧ್ಯವಿಲ್ಲವೆಂದಾದಲ್ಲಿ ಕಾರಣವೇನು ?

## ಸರ್ಕಾರಿ ಹಾಗೂ ಖಾಸಗಿ ಜಿಮ್ ಕೇಂದ್ರಗಳನ್ನು ತೆರೆಯಲು ಚಾಲ್ತಿಯಲ್ಲಿರುವ ಯೋಜನೆಗಳ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೬೭೦ (೨೦೭೬) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಒಳಾವರಣದ ಸ್ಥಳಾವಕಾಶವಿರುವ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿನ ವಾರ್ಡ್‌ಗಳ ಕಛೇರಿಗಳಲ್ಲಿ ಅಥವಾ ಸರ್ಕಾರಿ ಉದ್ಯಾನವನಗಳಲ್ಲಿ ಸಾರ್ವಜನಿಕರ ಉಪಯೋಗಕ್ಕಾಗಿ ಜಿಮ್ ಕೇಂದ್ರಗಳನ್ನು ಸರ್ಕಾರದ ವತಿಯಿಂದ ನಡೆಸಲು ಜಿಮ್ ಸಲಕರಣೆಗಳನ್ನು ಕೋರಿದಲ್ಲಿ ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಯಾವ ರೀತಿ ಅನುದಾನ ನೀಡಲಾಗುವುದು ;

(ಆ) ಇದಕ್ಕಾಗಿ ಹಣ ಕಾಯ್ದಿರಿಸಲಾಗಿದೆಯೇ, ಇದ್ದಲ್ಲಿ ವಿವರ ನೀಡುವುದು;

(ಇ) ರಾಜ್ಯದಲ್ಲಿ ಸರ್ಕಾರಿ ಮತ್ತು ಖಾಸಗಿಯಾಗಿ ಜಿಮ್ ಕೇಂದ್ರಗಳನ್ನು ತೆರೆಯುವ ಯೋಜನೆಗಳು ಜಾರಿಯಲ್ಲಿವೆ; ಕಳೆದ ಮೂರು ವರ್ಷಗಳಲ್ಲಿ ಸದರಿ ಯೋಜನೆಗಳು ಯಾವ ರೀತಿಯಲ್ಲಿ ಅನುಷ್ಠಾನಗೊಂಡಿವೆ ?

## ಜಿಲ್ಲೆಗೊಂದರಂತೆ ನಿರ್ಭಯಾ ಕೇಂದ್ರಗಳನ್ನು ಸ್ಥಾಪಿಸಲು ಜಾಗ ಗುರುತಿಸುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೬೭೧ (೨೦೭೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರದ ನಿರ್ಭಯಾ ಕೇಂದ್ರಗಳಿಗೆ ಜಾಗ ಗುರುತಿಸುವಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಜಿಲ್ಲಾಧಿಕಾರಿಗಳ ಕಛೇರಿಗೆ ಪ್ರಸ್ತಾವ ಬಂದಿರುವುದು ನಿಜವೆ ;

(ಆ) ನಿಜವಾಗಿದ್ದಲ್ಲಿ, ಯಾವ ಯಾವ ಸ್ಥಳಗಳಲ್ಲಿ ನಿರ್ಭಯಾ ಕೇಂದ್ರಗಳಿಗೆ ಸ್ಥಳವನ್ನು ಒದಗಿಸುವಂತೆ ಕೋರಲಾಗಿದೆ ; ಒಂದು ಕೇಂದ್ರಕ್ಕೆ ಕೋರಲಾದ ವಿಸ್ತೀರ್ಣವೆಷ್ಟು ; ಯಾವ ದಿನಾಂಕಗಳಂದು ಕೋರಲಾಗಿದೆ ?

## ಅಕ್ರಮಗಳ ಬಗ್ಗೆ ಆಡಳಿತಾಧಿಕಾರಿ ನೇಮಕಾತಿ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೧೬೭೨ (೨೦೮೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿಯ ಪ್ರವೀಣ ವಿದ್ಯಾ ಸಂಸ್ಥೆಯ ಹೆಸರಿನಲ್ಲಿ ನಡೆಯುತ್ತಿರುವ ಹಣಕಾಸು ಅವ್ಯವಹಾರ, ಸ್ಕಾಲರ್‌ಶಿಪ್ ಹಣ ದುರುಪಯೋಗ ಶಿಕ್ಷಕರ ಮೇಲೆ ಹಲ್ಲೆ, ದಬ್ಬಾಳಿಕೆ ಇತ್ಯಾದಿ ದೂರುಗಳ ಹಿನ್ನಲೆಯಲ್ಲಿ ಕಂದಾಯ ಇಲಾಖೆಯ ವತಿಯಿಂದ ಆಡಳಿತಾಧಿಕಾರಿ ನೇಮಕ ಮಾಡಿರುವುದು ನಿಜವೇ;



(ಆ) ನೇಮಕವಾಗಿದ್ದರೆ ಯಾವಾಗ; ಯಾವ ಕಾರಣಕ್ಕೆ ನೇಮಕ ಮಾಡಲಾಯಿತು ;

(ಇ) ಆಡಳಿತಾಧಿಕಾರಿ ನೇಮಕಾತಿಯನ್ನು ಹಿಂತೆಗೆದು ಕೊಳ್ಳಲಾಗಿದೆಯೇ ಅಥವಾ ರದ್ದುಪಡಿಸಲಾಗಿದೆಯೇ;

(ಈ) ಯಾವ ಕಾರಣಕ್ಕೆ ಆಡಳಿತಾಧಿಕಾರಿ ನೇಮಿಸಲಾಯಿತು ಮತ್ತು ಹಿಂತೆಗೆದುಕೊಳ್ಳಲಾಯಿತು; ಆ ಸಂಸ್ಥೆಯಲ್ಲಿ ನಡೆಯುತ್ತಿರುವ ಹಗರಣಗಳನ್ನು ಮುಚ್ಚಿ ಹಾಕಲು ಆ ಭಾಗದ ಪ್ರಭಾವಿ ರಾಜಕಾರಣಿಗಳು ಪ್ರಭಾವ ಬೀರುತ್ತಿದ್ದಾರೆ ಎನ್ನುವುದು ನಿಜವೇ;

(ಉ) ಪ್ರಸ್ತುತ ಸಂಸ್ಥೆಯ ಆಡಳಿತವನ್ನು ಯಾರಿಗೆ ವಹಿಸಲಾಗಿದೆ ?

## ಉದ್ಯೋಗ ಮತ್ತು ತರಬೇತಿ ಇಲಾಖೆಯಲ್ಲಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ೨೦೧೦ ರಲ್ಲಿ ನೇಮಕವಾದವರ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೧೬೭೩ (೨೦೮೨) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉದ್ಯೋಗ ಮತ್ತು ತರಬೇತಿ ಇಲಾಖೆಯ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ೨೦೧೦ರಲ್ಲಿ ಎಷ್ಟು ಕಿರಿಯ ತರಬೇತಿ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ ;

(ಆ) ಆಯ್ಕೆಯಾದ ಅಭ್ಯರ್ಥಿಗಳಲ್ಲಿ ಎಷ್ಟು ಜನ ಅಭ್ಯರ್ಥಿಗಳು ನಕಲಿ ಅನುಭವ ಪ್ರಮಾಣ ಪತ್ರಗಳನ್ನು ನೀಡಿರುತ್ತಾರೆ ; ಇವರ ಮೇಲೆ ತೆಗೆದುಕೊಂಡ ಕ್ರಮಗಳೇನು ;

(ಇ) ನಕಲಿ ಅನುಭವ ಪ್ರಮಾಣ ಪತ್ರಗಳನ್ನು ಸಲ್ಲಿಸಿದ ಅಭ್ಯರ್ಥಿಗಳ ಮೇಲೆ ಕ್ರಮ ಕೈಗೊಂಡಿದ್ದಲ್ಲಿ ಇನ್ನುಳಿದ ಆಯ್ಕೆಯಾದ ಅಭ್ಯರ್ಥಿಗಳ ಖಾಯಂ ಪೂರ್ವ ಸೇವಾವಧಿಯನ್ನು ಘೋಷಣೆ ಮಾಡಲಾಗಿದೆಯೇ;

(ಈ) ಮಾಡಿದ್ದರೆ, ಯಾವ ದಿನಾಂಕದಂದು ಮಾಡಲಾಗಿದೆ ; ಎಷ್ಟು ಅಭ್ಯರ್ಥಿಗಳಿಗೆ ಮಾಡಲಾಗಿದೆ ; (ಹೆಸರುವಾರು, ವಿಳಾಸವಾರು ಸಂಪೂರ್ಣ ವಿವರ ನೀಡುವುದು)

(ಉ) ಸದರಿ, ಆಯ್ಕೆಯಾದ ಅಭ್ಯರ್ಥಿಗಳಿಗೆ ಖಾಯಂ ಪೂರ್ವ ಸೇವಾವಧಿಯನ್ನು ಘೋಷಣೆ ಮಾಡದೇ ಇದ್ದಲ್ಲಿ ಘೋಷಣೆ ಮಾಡದಿರಲು ಕಾರಣವೇನು; ಯಾವಾಗ ಮಾಡಲಾಗುವುದು ? (ವಿವರ ನೀಡುವುದು)

## ಸರ್ಕಾರಿ ITI ನೌಕರರಿಗೆ ಕೇಂದ್ರ ಸರ್ಕಾರದ DGET ಹೊಸ ವೇತನ ಜಾರಿಗೊಳಿಸುವ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೬೭೪ (೨೦೮೩) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಐ.ಟಿ.ಐ. ನೌಕರರಿಗೆ ಕೇಂದ್ರ ಸರ್ಕಾರದ DGET ಹೊಸ ವೇತನವನ್ನು ಎಂದಿನಿಂದ ಜಾರಿಗೆ ತಂದಿರುತ್ತದೆ ;

(ಆ) ರಾಜ್ಯದ ಸರ್ಕಾರಿ ಐ.ಟಿ.ಐ. ನೌಕರರಿಗೆ ಸದರಿ ವೇತನ ಸೌಲಭ್ಯ ಜಾರಿಯಾಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಈವರೆಗೆ ಸದರಿ ವೇತನ ವಿಸ್ತರಿಸದೆ ಇರಲು ಕಾರಣಗಳೇನು ; (ವಿವರ ನೀಡುವುದು)



(ಇ) ರಾಜ್ಯ ಸರ್ಕಾರ ಹೊಸ ವೇತನ ನೀಡಲು ಯಾವ ಕಾಲಮಿತಿಯಲ್ಲಿ ಕ್ರಮ ಕೈಗೊಳ್ಳಲಿದೆ ?

## ಜೀವ ವೈವಿಧ್ಯ ಮಂಡಳಿ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೬೭೫ (೨೦೮೫) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಜೀವ ವೈವಿಧ್ಯ ಮಂಡಳಿಯನ್ನು ಯಾವಾಗ ಸ್ಥಾಪಿಸಲಾಯಿತು ; ಇದರ ಗುರಿ ಹಾಗೂ ಉದ್ದೇಶಗಳು ಯಾವುವು ; (ವಿವರವಾದ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿರುವ ಜೀವ ವೈವಿಧ್ಯ ಪ್ರಬೇಧಗಳು ಎಷ್ಟು; ಯಾವುವು;

(ಇ) ಇವುಗಳ ಉಳಿವಿಗೆ ಸರ್ಕಾರ ಯಾವ ಕಾರ್ಯಕ್ರಮಗಳನ್ನು ಹಾಕಿಕೊಂಡಿದೆ ;

(ಈ) ಇದರ ಕೇಂದ್ರ ಕಛೇರಿ ಎಲ್ಲಿದೆ; ಕೆಲಸ ನಿರ್ವಹಿಸುತ್ತಿರುವ ನೌಕರರು ಎಷ್ಟು ; ಅವರು ಪಡೆಯುವ ವೇತನ ಎಷ್ಟು ?

## ನೆಮ್ಮದಿ ಕೇಂದ್ರಗಳು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೬೭೬ (೨೦೮೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ನೆಮ್ಮದಿ ಕೇಂದ್ರಗಳಿಗೆ ಸೋಲಾರ ವ್ಯವಸ್ಥೆಯಿಂದ ವಿದ್ಯುತ್ ಒದಗಿಸುವ ಯೋಜನೆಯನ್ನು ಯಾವ ದಿನಾಂಕದಿಂದ ಪ್ರಾರಂಭಗೊಂಡು, ಮುಕ್ತಾಯಗೊಂಡಿದ್ದು ಯಾವಾಗ ;

(ಆ) ಒಂದು ನೆಮ್ಮದಿ ಕೇಂದ್ರಕ್ಕೆ ಟೆಂಡರ್‌ದಾರರು ಸುಮಾರು ೫ಲಕ್ಷ ರೂ. ಗಳ ಯಾವ ಯಾವ ಸಾಮಗ್ರಿಗಳನ್ನು ಸರಬರಾಜು ಮಾಡಿರುತ್ತಾರೆ; ಸಾಮಗ್ರಿಗಳ ವಿವರ ಅವುಗಳಿಗೆ ನಮೂದಿಸಿದ ಮೊತ್ತಗಳ ವಿವರ ನೀಡುವುದು;

(ಇ) ಸದರಿ ಸಾಮಗ್ರಿಗಳು ಸುಸ್ಥಿತಿಯಲ್ಲಿದೆಯೇ ಹಾಗೂ ಕಾರ್ಯನಿರ್ವಹಿಸುತ್ತಿವೆಯೆ;

(ಈ) ಸರ್ಕಾರ ಹಾಗೂ ಟೆಂಡರ್‌ದಾರರ ನಡುವೆ ಆದ ಒಡಂಬಡಿಕೆಯ ಪ್ರತಿ ನೀಡುವುದು ?

## ಎತ್ತಿನ ಹೊಳೆ ಯೋಜನೆಗೆ ನೀಡಿರುವ ಅನುದಾನ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೧೬೭೭ (೨೦೮೭) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರವು ಎತ್ತಿನ ಹೊಳೆ ಯೋಜನೆಗೆ ಎಷ್ಟು ಅನುದಾನ ಒದಗಿಸಿದೆ;

(ಆ) ಸದರಿ ಅನುದಾನದಲ್ಲಿ ಕೈಗೊಳ್ಳಲಾದ ಕಾಮಗಾರಿಗಳು ಯಾವುವು ; ಆ ಪೈಕಿ ಪೂರ್ಣಗೊಂಡ ಕಾಮಗಾರಿಗಳು ಯಾವುವು ; (ವಿವರ ನೀಡುವುದು)

(ಇ) ಎತ್ತಿನ ಹೊಳೆ ಯೋಜನೆಯ ಯೋಜನಾ ಗಾತ್ರ ಎಷ್ಟು;

(ಈ) ಸರ್ಕಾರವು ಯಾವ ಕಾಲಮಿತಿಯಲ್ಲಿ ಈ ಯೋಜನೆಯನ್ನು ಪೂರ್ಣಗೊಳಿಸಲು ಉದ್ದೇಶಿಸಿದೆ ?



## ಕೆರೆಗಳ ಅಭಿವೃದ್ಧಿ ಮತ್ತು ಏತ ನೀರಾವರಿ ಪರಿಸ್ಥಿತಿ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೭೮ (೨೦೮೮) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫–೧೬ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಯಲ್ಲಿ ಕೆರೆಗಳ ಅಭಿವೃದ್ಧಿಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಅವು ಯಾವುವು; ಅದಕ್ಕೆ ತಗಲುವ ಅಂದಾಜು ಮೊತ್ತ ಎಷ್ಟು;

(ಆ) ಮಾನ್ವಿ ಹಾಗೂ ರಾಯಚೂರು ತಾಲ್ಲೂಕಿನಲ್ಲಿರುವ ಏತ ನೀರಾವರಿ ಯೋಜನೆಗಳಾವುವು; (ವಿವರ ನೀಡುವುದು) ಪ್ರಸ್ತುತ ಏತ ನೀರಾವರಿಗಳ ಕಾಮಗಾರಿ ಪ್ರಗತಿ ಯಾವ ಹಂತದಲ್ಲಿದೆ; ಅದಕ್ಕೆ ಸರ್ಕಾರ ತೆಗೆದುಕೊಂಡ ಕ್ರಮವೇನು ?

## ರಾಯಚೂರು ಎನ್‌ಆರ್‌ಬಿಸಿ ಕಾಲುವೆ ಮತ್ತು ರಾಜಲ ಬಂಡಾ ಡ್ಯಾಮ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೭೯ (೨೦೮೯) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ನಿರ್ಮಿಸುತ್ತಿರುವ ಎನ್.ಆರ್.ಬಿ.ಸಿ ಕಾಲುವೆ ೧೬೨ ಮೈಲಿಯವರೆಗೆ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಆ) ರಾಯಚೂರು ಮತ್ತು ದೇವದುರ್ಗ ತಾಲ್ಲೂಕುಗಳಲ್ಲಿ ಎನ್.ಆರ್.ಬಿ.ಸಿ ಮುಖಾಂತರ ಕೆರೆಗಳಿಗೆ ನೀರು ತುಂಬಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೆ; ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮವೇನು;

(ಇ) ಮಾನ್ವಿ ತಾಲ್ಲೂಕಿನ ತುಂಗಾಭದ್ರ ನದಿಯ ಮೇಲೆ ಇರುವ ರಾಜಲಬಂಡಾ ಡ್ಯಾಮ್ (ಆರ್.ಡಿ.ಎಸ್)ಗೆ ಅಭಿವೃದ್ಧಿ ಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು; ಈ ಡ್ಯಾಮಿನ ಪೈಭಾಗದಲ್ಲಿರುವ ಸಿಲ್ಟ್ (ಊಳು)ನ್ನು ತೆಗೆಯುವಲ್ಲಿ ಸರ್ಕಾರ ತೆಗೆದುಕೊಂಡ ಕ್ರಮವೇನು;

(ಈ) ಮಾನ್ವಿ ತಾಲ್ಲೂಕಿನ ನೆರವಾರ ಮತ್ತು ಮಾನ್ವಿ ಪಟ್ಟಣದಲ್ಲಿರುವ ನೀರಾವರಿ ಇಲಾಖೆಯ ಸಿಬ್ಬಂದಿಗಳಿಗೆ ವಸತಿ ಸೌಲಭ್ಯ ಒದಗಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು;

(ಉ) ರಾಯಚೂರು ಜಿಲ್ಲೆಯಲ್ಲಿ ನೀರಾವರಿಗೆ ಒಳಪಟ್ಟಿರುವ ಭೂಮಿ ಎಷ್ಟು ; ನೀರಾವರಿಗೆ ಒಳಪಡದ ಭೂಮಿ ಎಷ್ಟು ? (ವಿವರ ನೀಡುವುದು)

## ರಾಯಚೂರಿನಲ್ಲಿ ಕಾರ್ಮಿಕ ಭವನ ಮತ್ತು ಮಾನ್ವಿಯಲ್ಲಿ ಐಟಿಐ ಕಾಲೇಜು ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೮೦ (೨೯೮೦) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯ ಮಾನ್ವಿ ತಾಲ್ಲೂಕಿನಲ್ಲಿ ಸರ್ಕಾರಿ ಐ.ಟಿ.ಐ ಕಾಲೇಜು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆಯೇ ;



(ಆ) ರಾಯಚೂರು ನಗರದ ಎಪಿಎಂಸಿ ಆವರಣದಲ್ಲಿ ಕಾರ್ಮಿಕ ಭವನ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮವೇನು;

(ಇ) ರಾಯಚೂರು ಜಿಲ್ಲೆಯಲ್ಲಿರುವ ಒಟ್ಟು ಕಾರ್ಮಿಕರ ಸಂಖ್ಯೆ ಎಷ್ಟು ; ಕಳೆದ ಎರಡು ವರ್ಷಗಳಲ್ಲಿ ಕಾರ್ಮಿಕರಿಗಾಗಿ ಸರ್ಕಾರ ಒದಗಿಸಿರುವ ಸೌಲಭ್ಯಗಳೇನು ? (ತಾಲ್ಲೂಕುವಾರು ವಿವರ ನೀಡುವುದು)

## ರಾಯಚೂರು ಜಿಲ್ಲಾಡಳಿತಭವನ ಮತ್ತು ಮಾನ್ವಿಯ ಮಿನಿ ವಿಧಾನಸೌಧ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೮೧ (೨೯೮೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; ೩೭೧ (ಜೆ) ಕಲಂ ಪ್ರಕಾರ ಭರ್ತಿ ಮಾಡಿಕೊಳ್ಳಲು ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಆ) ರಾಯಚೂರು ಜಿಲ್ಲೆಯ ಮಾನ್ವಿ ನಗರದಲ್ಲಿ ಮಿನಿ ವಿಧಾನಸೌಧ ನಿರ್ಮಿಸುವ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಇ) ರಾಯಚೂರು ಜಿಲ್ಲೆಯಲ್ಲಿ ಜಿಲ್ಲಾಡಳಿತಭವನ ನಿರ್ಮಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಈ) ರಾಯಚೂರು ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಕಂದಾಯ ಇಲಾಖೆಗೆ ಒಳಪಡುವ ಸರ್ಕಾರದ ಭೂಮಿ ಎಷ್ಟು ? (ತಾಲ್ಲೂಕುವಾರ ವಿವರ ನೀಡುವುದು)

## ರಾಯಚೂರು ಜಿಲ್ಲೆಯಲ್ಲಿ ಮೀನುಗಾರಿಕೆ ಅಭಿವೃದ್ಧಿ ಪಡಿಸುವ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೮೨ (೨೦೯೨) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ಮೀನುಗಾರಿಕೆಯನ್ನು ಅಭಿವೃದ್ಧಿ ಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು; ಸರ್ಕಾರದಿಂದ ಕೊಟ್ಟಿರುವ ಸೌಲಭ್ಯಗಳಾವುವು;

(ಆ) ರಾಯಚೂರು ಜಿಲ್ಲೆಯಲ್ಲಿರುವ ಕೃಷ್ಣ ಮತ್ತು ತುಂಗಾಭದ್ರ ನದಿಗಳು ಹಾಗೂ ಕೆರೆಗಳ ಮುಖಾಂತರ ಮೀನುಗಾರಿಕೆ ಅಭಿವೃದ್ಧಿ ಪಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮವೇನು;

(ಇ) ರಾಯಚೂರು ನಗರದಲ್ಲಿರುವ ಮಾವಿನಕೆರೆ ಪಕ್ಕದಲ್ಲಿರುವ ಫಿಶ್ ಫಂಡ್ ಉಪಯೋಗ ಮಾಡದೇ ಇರುವ ವಿಚಾರ ಸರ್ಕಾರದ ಗಮನದಲ್ಲಿದೆಯೆ; ಹಾಗಿದ್ದಲ್ಲಿ, ಫಿಶ್ ಫಂಡ್ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು ?



## ಸಮುದಾಯಗಳಿಗೆ ಜಮೀನು ಮಂಜೂರಾತಿ ಮಾಡುವ ಕುರಿತು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೧೬೮೩ (೨೦೯೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಂದಾಯ ಇಲಾಖೆಯ ಜಮೀನುಗಳನ್ನು ಜನಾಂಗದ ಸಮುದಾಯಗಳ ಅಭಿವೃದ್ಧಿಗಾಗಿ ಮಂಜೂರಾತಿ ಮಾಡಲು ಇರುವ ಮಾನದಂಡಗಳೇನು ;

(ಆ) ಗ್ರಾಮೀಣ ಪ್ರದೇಶಗಳಲ್ಲಿ ಸಂಬಂಧಿಸಿದ ಸಮುದಾಯ ಜನಾಂಗದವರು, ದೇವಸ್ಥಾನ, ಸಮುದಾಯ ಭವನ ಇತ್ಯಾದಿಗಳನ್ನು ನಿರ್ಮಿಸಲು ೧೦ ಗುಂಟೆಯಿಂದ ೧ ಎಕರೆವರೆಗೆ ಮಂಜೂರಾತಿ ನೀಡಲು ತೆಗೆದುಕೊಂಡ ಕ್ರಮಗಳೇನು ;

(ಇ) ಅರ್ಜಿ ಹಾಕಿದ ಎಷ್ಟು ದಿನಗಳಲ್ಲಿ ಮಂಜೂರಾತಿ ನೀಡಲಾಗುವುದು ; ಯಾವ ಮಟ್ಟದಲ್ಲಿ ನೀಡಲಾಗುತ್ತದೆ?

## ಬೆಳಗಾವಿ ವಾಗವಾಡಿಯಲ್ಲಿ ಜವಳಿ ಪಾರ್ಕ್ ನಿರ್ಮಾಣ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೧೬೮೪ (೨೦೯೪) ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆ ವಾಗವಾಡಿ ಗ್ರಾಮದ ಬಳಿಯಿರುವ ಜಮೀನಿನಲ್ಲಿ ಜವಳಿ ಪಾರ್ಕ್ (ಟೆಕ್ಸ್ ಟೈಲ್) ಮಾಡಲು ಘೋಷಣೆ ಮಾಡಲಾಗಿದ್ದು ಯಾವಾಗ ;

(ಆ) ಸದರಿ ಜಮೀನಿನ ವಿಸ್ತೀರ್ಣ ಎಷ್ಟು; ಯಾವ ಸರ್ವೆ ನಂಬರ್‌ನಲ್ಲಿದೆ;

(ಇ) ಇದುವರೆವಿಗೂ ಜವಳಿ ಪಾರ್ಕ್ ಬಗ್ಗೆ ಗಮನಹರಿಸಿ ನೇಕಾರರಿಗೆ ಅನುಷ್ಠಾನ ಮಾಡಿ ಕೊಡದಿರಲು ಕಾರಣಗಳೇನು; (ಮಾಹಿತಿ ನೀಡುವುದು)

(ಈ) ಹಾಗಿದ್ದಲ್ಲಿ, ಪ್ರಸಕ್ತ ಸಾಲಿನಲ್ಲಿ ಪ್ರಾರಂಭ ಮಾಡಲಾಗುವುದೆ?

## ಗಂಗಾ ಕಲ್ಯಾಣ ಕೊಳವೆ ಬಾವಿ ಮಂಜೂರಾತಿ ಕುರಿತು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೧೬೮೫ (೨೦೯೫) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಣ್ಣ ನೀರಾವರಿ ಇಲಾಖೆಯಿಂದ ರಾಜ್ಯದ ರೈತರಿಗೆ ಕೊಳವೆ ಬಾವಿಗಳನ್ನು ಕೊರೆಯಲು ಇರುವ ಮಾನದಂಡವೇನು ;



(ಆ) ಸಣ್ಣ ರೈತರು ಅರ್ಜಿ ಹಾಕಿದ್ದರೂ ಕೊಳವೆ ಬಾವಿ ಮಂಜೂರು ಮಾಡದಿರಲು ಕಾರಣವೇನು;

(ಇ) ಈಗಾಗಲೇ ಅರ್ಜಿ ಹಾಕಿರುವ ರೈತರಿಗೆ ಯಾವಾಗ ಮಂಜೂರು ಮಾಡಲಾಗುವುದು ಹಾಗೂ ಇಲಾಖೆಯಲ್ಲಿ ಇರುವ ಅರ್ಜಿಗಳೆಷ್ಟು ? (ವಿವರ ನೀಡುವುದು)

## ನೇಕಾರರ ಮಕ್ಕಳಿಗೆ ಸೌಲಭ್ಯ ನೀಡುವ ಕುರಿತು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೧೬೮೬ (೨೦೯೬) ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ವಿಭಾಗದಲ್ಲಿ ಹೆಚ್ಚಿನ ನೇಕಾರರು ನೇಕಾರ ವೃತ್ತಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಆ) ನೇಕಾರರ ಮಕ್ಕಳಿಗೆ Diploma in Textile, Textile Research Center, Fashion Technology, Design Cad Course ಮತ್ತು ನೇಕಾರರಿಗೆ ಸಂಬಂಧಿತ ವಿಷಯಗಳ ಬಗ್ಗೆ ವ್ಯಾಸಂಗ ಮಾಡಲು ಈ ವಿಭಾಗದಲ್ಲಿ ಕಾಲೇಜು ಮಾಡದಿರಲು ಕಾರಣಗಳೇನು ;

(ಇ) ನೇಕಾರರ ಮಕ್ಕಳ ಅವಲಂಭಿತ ವೃತ್ತಿ ನೇಕಾರಿಕೆ ವಿಷಯ ಕಲಿಯಲು ಹೊರ ರಾಜ್ಯಗಳಿಗೆ ಹೋಗುತ್ತಿರುವುದನ್ನು ತಪ್ಪಿಸಿ, ಈ ವಿಭಾಗದಲ್ಲಿಯೇ ಸ್ಥಾಪಿಸಿ ನೇಕಾರರಿಗೆ ಅನುಕೂಲ ಮಾಡಿಕೊಡಲಾಗುವುದೇ ;

(ಈ) ಹಾಗಿದ್ದಲ್ಲಿ, ಯಾವಾಗ ಮಾಡಲಾಗುವುದು ?

## ಬೆಳಗಾವಿ ವಿಭಾಗದಲ್ಲಿ ಯಾರ್ನ್ ಡಿಪೋ ಮಾಡುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು)** :–

೧೬೮೭ (೨೦೯೭) ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ವಿಭಾಗದಲ್ಲಿ ಅತಿ ಹೆಚ್ಚು ವಿದ್ಯುತ್ ಮಗ್ಗದ ನೇಕಾರರು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಇತ್ತೀಚಿನ ದಿನಗಳಲ್ಲಿ ನೂಲು, ಸಿಂಥೆಟಿಕ್ ರೇಷ್ಮೆ, ಮಾರುಕಟ್ಟೆ ದರ ವ್ಯತ್ಯಾಸಗಳಿಂದ ನೇಕಾರರಿಗೆ ಶೋಷಣೆಯಾಗುತ್ತಿರುವುದು ಸರ್ಕಾರ ಗಮನಹರಿಸಿರುವುದೇ ;

(ಇ) ಜವಳಿ ಇಲಾಖೆಯಿಂದ ಸಂಘ ಸಂಸ್ಥೆ ಅಥವಾ ಎಸ್‌ಪಿಯು ಮುಖಾಂತರ ಖಚ್ಚಾ ಮಾಲು ಕಡಿಮೆದರದಲ್ಲಿ ಪೂರೈಸಲು ಸಹಾಯಧನ ನೀಡಲು ಮುಂದೆ ಬರದಿರಲು ಕಾರಣಗಳೇನು ;

(ಈ) ನೇಕಾರರಿಗೆ ಅನುಕೂಲ ಮಾಡಲು ಈ ವರ್ಷದಿಂದ ಪ್ರಾರಂಭ ಮಾಡಲಾಗುವುದೆ ?



## ನೇಕಾರ ಕುಟುಂಬದವರಿಗೆ ವಸತಿ ಸೌಕರ್ಯ ಕಲ್ಪಿಸುವ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು)** :–

೧೬೮೮ (೧೪೩೪) ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಾವಣಗೆರೆ ಜಿಲ್ಲೆಯಲ್ಲಿರುವ ನೇಕಾರ ಕುಟುಂಬಗಳ ಸಂಖ್ಯೆ ಎಷ್ಟು; (ಮಾಹಿತಿ ನೀಡುವುದು)

(ಆ) ನೇಕಾರ ಕುಟುಂಬದವರಿಗೆ ವಾಸಿಸಲು ಮನೆಗಳಿಲ್ಲದೆ ತೀವ್ರ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ವಸತಿ ಸೌಕರ್ಯಗಳನ್ನು ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ವಸತಿ ಸೌಕರ್ಯಗಳನ್ನು ಕಲ್ಪಿಸಿದ್ದರೆ ಕುಟುಂಬಗಳ ಸಂಖ್ಯೆಯನ್ನು ನೀಡುವುದು ?

## ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಹುದ್ದೆ ಖಾಲಿ

**ಶ್ರೀ ಎಂ. ಶ್ರೀನಿವಾಸ್ (ವಿಧಾನ ಸಭೆಯಿಂದ ಚುನಾಯಿತರಾದವರು)** :–

೧೬೮೯ (೨೦೩೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲಾಧಿಕಾರಿಗಳ ಕಛೇರಿಗಳಿಗೆ ಮಂಜೂರಾದ ಹುದ್ದೆಗಳು ಭರ್ತಿಯಾದ ಹುದ್ದೆಗಳು

ಮತ್ತು ಪ್ರಸ್ತುತ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ಗ್ರೂಪ್ "ಸಿ" ದರ್ಜೆಯ ಖಾಲಿ ಹುದ್ದೆಗಳ ಪ್ರತ್ಯೇಕ ಮಾಹಿತಿ ಒದಗಿಸುವುದು)

(ಆ) ಖಾಲಿ ಇರುವ ಹುದ್ದೆ/ನೌಕರರ ಕೊರತೆಯಿಂದ ಸಾರ್ವಜನಿಕ ದೈನಂದಿನ ಕಾರ್ಯಗಳು ವಿಳಂಬವಾಗುವುದನ್ನು ತಪ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳು ಏನು ; (ಮಾಹಿತಿ ಒದಗಿಸುವುದು)

(ಇ) ಇತರೆ ಇಲಾಖೆಗಳಿಂದ ಕಂದಾಯ ಇಲಾಖೆಗೆ ನಿಯೋಜನೆ ಅಥವಾ ವಿಲೀನಗೊಳ್ಳಲು ಇಚ್ಛಿಸುವ ನೌಕರರ ಕೋರಿಕೆಯನ್ನು ಸರ್ಕಾರವು ಪರಿಗಣಿಸುವುದೇ ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರದ ಚಿಂತನೆ ಏನು ? (ವಿವರ ನೀಡುವುದು)

**ವಿ. ಶ್ರೀಶ್**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಘಟಕ–2, ಬೆಂ–59/ಕಾ.ಸೂ. 3586/700 ಪ್ರತಿಗಳು/20–07–2015